ಸಂಪುಟ 01 | ಸಂಚಿಕೆ 198 | ಭಾನುವಾರ 14 ಜೂನ್ 2026 | ಪುಟ 4 | ಬೆಲೆ-2 ರೂ.

ಇರ್ಫಾನ್ ಕೆ
ಸಂಪಾದಕರು

M A ವಹಾಬ್
ಪ್ರಧಾನ ಸಂಪಾದಕರು

# ನೈಜ್ಯ ದೇಸೆ

NAIJYA DESE

ಸತ್ಯದ ದಿಕ್ಕು TRUE PATH

ಕನ್ನಡ ದಿನ ಪತ್ರಿಕೆ

ಸಿಂಧನೂರು, ಮಸ್ಕಿ ಮಾನ್ವಿ, ಲಿಂಗಸೂರು, ರಾಯಚೂರ,ದೇವದುರ್ಗ ಬಳ್ಳಾರಿ, ಕೊಪ್ಪಳ ಯಾದಗಿರಿ, ಕಲಬುರ್ಗಿ, ಬೀದರ, ವಿಜಯಪುರ. ಗದಗ, ವಿಜಯನಗರ. ಏಕಕಾಲಕ್ಕೆ ಪ್ರಕಟಣೆ

REGIONAL KANNADA DAILY MORNING

RNI code: KNKAN/25/A3581 ಮೋ: 9902277588, 9880707587, 9008787586 naijyadese@gmail.com

## ಈ ದಿನದ ವಿಶೇಷ

**1) ವಿಶ್ವ ರಕ್ತದಾನಿಗಳ ದಿನ**

ಸ್ವಯಂಪ್ರೇರಿತ ರಕ್ತದಾನದ ಮೂಲಕ ಜೀವ ಉಳಿಸುವ ಬಗ್ಗೆ ಜಾಗೃತಿ ಮೂಡಿಸಲು ಈ ದಿನವನ್ನು ಆಚರಿಸಲಾಗುತ್ತದೆ. ಈ ದಿನದಂದು ಪ್ರಪಂಚದಾದ್ಯಂತ ರಕ್ತದಾನ ಶಿಬಿರಗಳು ನಡೆಯುತ್ತವೆ.

**2) ಧ್ವಜ ದಿನ :**

ಅಮೆರಿಕಾದಲ್ಲಿ 1777 ರ ಜೂನ್ 14 ರಂದು 'ಸ್ಟಾರ್ಸ್ ಅಂಡ್ ಸ್ಟ್ರೈಪ್ಸ್' ಧ್ವಜವನ್ನು ಅಳವಡಿಸಿಕೊಂಡಿದ್ದನ್ನು ನೆನಪಿಸಿಕೊಳ್ಳಲು ಇದನ್ನು ಆಚರಿಸಲಾಗುತ್ತದೆ

## ಸುಭಾಷಿತ

ಎಲ್ಲರನ್ನೂ ಪ್ರೀತಿಸು, ಕೆಲವರನ್ನಷ್ಟೇ ನಂಬು, ಯಾರಿಗೂ ಕೇಡು ಬಗೆಯಬೇಡ. ಇದುವೇ ಜೀವನದ ನಿಜ ಸೂತ್ರ

–ವಿಲಿಯಂ ಶೇಕ್ಸ್‌ಪಿಯರ್

## ಒಂದು ವಾಹನಕ್ಕೆ ದಿನಕ್ಕೆ 200 ಲೀಟರ್ ಡೀಸೆಲ್ ಮಿತಿ ನಿಗದಿಪಡಿಸಿದ ಕೇಂದ್ರ ಸರ್ಕಾರ

❑ ನೈಜ್ಯ ದೇಸೆ ನ್ಯೂಸ್

**ನವದೆಹಲಿ; ಪೆಟ್ರೋಲ್ ಬಂಕ್‌ಗಳಲ್ಲಿ ಒಂದು ವಾಹನಕ್ಕೆ ದಿನಕ್ಕೆ 200 ಲೀಟರ್ ಡೀಸೆಲ್ ಖರೀದಿಗೆ ಕೇಂದ್ರ ಸರ್ಕಾರ ಮಿತಿ ನಿಗದಿಪಡಿಸಿದೆ. ಇಂಧನ ಅಕ್ರಮ ದಾಸ್ತಾನು ಮತ್ತು ಕಾಳಸಂತೆಯಲ್ಲಿ ಮಾರಾಟವನ್ನು ತಡೆಯಲು ಈ ಕ್ರಮಕೈಗೊಳ್ಳಲಾಗಿದೆ ಎಂದು ಕೇಂದ್ರ ಸರ್ಕಾರ ಸಬೂಬು ಹೇಳಿದೆ.**



ವಾಣಿಜ್ಯ, ಕೈಗಾರಿಕಾ ಮತ್ತು ಸಾಂಸ್ಥಿಕ ಗ್ರಾಹಕರು ಇನ್ಮುಂದೆ ರಿಟೇಲ್ ಬಂಕ್‌ಗಳಲ್ಲಿ ಡೀಸೆಲ್ ಖರೀದಿಸುವಂತಿಲ್ಲ. ವಾಣಿಜ್ಯ ಉದ್ದೇಶಕ್ಕೆ ನಿಗದಿಪಡಿಸಿದ ಮಾರಾಟ ಕೇಂದ್ರಗಳಿಂದಲೇ ಇಂಧನ ಖರೀದಿಸಬೇಕು ಎಂದು ಸೂಚಿಸಿದೆ. ಪೆಟ್ರೋಲ್ ಪಂಪ್‌ಗಳಲ್ಲಿ ಡೀಸೆಲ್ ಲೀಟರ್‌ಗೆ 95.20 ರೂ. ಗಳಾಗಿದ್ದರೆ, ಬೃಹತ್ ಮಾರಾಟ ಕೇಂದ್ರಗಳಲ್ಲಿ ಈ ಬೆಲೆ 134.50 ರೂ. ಇದೆ. ದರ ಕಡಿಮೆ ಇರುವುದರಿಂದ ಬೃಹತ್ ವಾಹನಗಳ ಗ್ರಾಹಕರು ಪೆಟ್ರೋಲ್ ಬಂಕ್‌ಗಳಲ್ಲಿ ಇಂಧನ ಖರೀದಿಸುತ್ತಿದ್ದಾರೆ. ಇದನ್ನು ತಪ್ಪಿಸಲು ಹೊಸ ನಿಯಮ ಜಾರಿಗೊಳಿಸಲಾಗಿದೆ. ಬಂಕ್‌ಗಳಲ್ಲಿ ಡೀಸೆಲ್ ಅನ್ನು ವಾಹನದ ಇಂಧನ ಟ್ಯಾಂಕ್‌ಗೇ ತುಂಬಿಸಿ ಮಾರಬೇಕು. ಕ್ಯಾನ್, ಬ್ಯಾರೆಲ್‌ಗಳಲ್ಲಿ ತುಂಬಿಸಿ ಮಾರುವಂತಿಲ್ಲ. ಪೆಟ್ರೋಲಿಯಂ ಮತ್ತು ಸ್ಫೋಟಕ ಸುರಕ್ಷಿತಾ ಸಂಸ್ಥೆ ಅನುಮತಿಸಿದ ಕ್ಯಾನ್‌ನಲ್ಲಿ ಡೀಸೆಲ್ ಖರೀದಿಸಬಹುದು ಎಂದು ಸೂಚನೆ ನೀಡಿದೆ. ಮಧ್ಯಪ್ರಾಚ್ಯ ಯುದ್ಧದಿಂದ ಜಾಗತಿಕ ಮಟ್ಟದಲ್ಲಿ ತೈಲ ಬಿಕ್ಕಟ್ಟು ಉಂಟಾಗಿದೆ. ಭಾರತದಲ್ಲೂ ಪೆಟ್ರೋಲ್ ಮತ್ತು ಡೀಸೆಲ್ ಪೂರೈಕೆಯಲ್ಲಿ ವ್ಯತ್ಯಯವಾಗಿದೆ. ಹೀಗಾಗಿ, ರಿಟೇಲ್ ಬಂಕ್‌ಗಳಲ್ಲಿ ಇಂಧನ ಕೊರತೆ ಆಗದಂತೆ ನೋಡಿಕೊಳ್ಳಲು ಮಿತಿ ಕ್ರಮ ಅನುಸರಿಸಲಾಗಿದೆ ಎಂದು ಕೇಂದ್ರ ಸರ್ಕಾರ ತಿಳಿಸಿದೆ.

# ಸನ್ ರೈಸ್ ಶಿಕ್ಷಣ ಸಂಸ್ಥೆಯಲ್ಲಿ ಮಾದಕ ದ್ರವ್ಯ ಮುಕ್ತ ಜಾಗೃತಿ ಉಪನ್ಯಾಸ

"ಮಾದಕ ದ್ರವ್ಯಗಳಿಂದ ದೂರವಿದ್ದು ಮಹನೀಯರ ಆದರ್ಶಗಳನ್ನು ಅಳವಡಿಸಿಕೊಳ್ಳಿ: ಡಿವೈಎಸ್ಪಿ ಚಂದ್ರಶೇಖರ್ ಜಿ"

❑ ನೈಜ್ಯ ದೇಸೆ ನ್ಯೂಸ್

**ಸಿಂಧನೂರು: ಯುವ ಸಮುದಾಯವನ್ನು ಮಾದಕ ದ್ರವ್ಯಗಳ ದಾಸ್ಯದಿಂದ ಮುಕ್ತಗೊಳಿಸುವ ಉದ್ದೇಶದಿಂದ ಸಿಂಧನೂರು ತಾಲೂಕಿನ ಸನ್ ರೈಸ್ ಡಿ–ಫಾರ್ಮಸಿ, ನರ್ಸಿಂಗ್ ಹಾಗೂ ಪ್ಯಾರಾಮೆಡಿಕಲ್ ಕಾಲೇಜು, ಸಿಂಧನೂರು ವತಿಯಿಂದ ರಾಯಚೂರು ಜಿಲ್ಲಾ ಪೊಲೀಸ್ ಇಲಾಖೆ ಹಾಗೂ ಸಿಂಧನೂರು ಪೊಲೀಸ್ ಉಪವಿಭಾಗದ ಸಹಯೋಗದಲ್ಲಿ "ಮಾದಕ ದ್ರವ್ಯ ವಸ್ತುಗಳ ಮುಕ್ತ ಜಾಗೃತಿ ಉಪನ್ಯಾಸ" ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಯಿತು.**

ಕಾರ್ಯಕ್ರಮಕ್ಕೆ ಮುಖ್ಯ ಅತಿಥಿಗಳಾಗಿ ಆಗಮಿಸಿದ ಸಿಂಧನೂರಿನ ಉಪ ಪೊಲೀಸ್ ವರಿಷ್ಠಾಧಿಕಾರಿಗಳಾದ ಶ್ರೀ ಚಂದ್ರಶೇಖರ್ ಜಿ ಅವರು ವಿದ್ಯಾರ್ಥಿಗಳನ್ನು ಉದ್ದೇಶಿಸಿ ಮಾತನಾಡಿ, ಇಂದಿನ ಸಮಾಜದಲ್ಲಿ ಯುವಜನತೆಯನ್ನು ಕಾಡುತ್ತಿರುವ ದೊಡ್ಡ ಸಾಮಾಜಿಕ ಪಿಡುಗು ಮಾದಕ ದ್ರವ್ಯ ವ್ಯಸನವಾಗಿದೆ ಎಂದು ಹೇಳಿದರು. ಸಿಗರೇಟ್, ಗುಟ್ಕಾ, ಮದ್ಯ, ಗಾಂಜಾ ಹಾಗೂ ಇತರ ಮಾದಕ ವಸ್ತುಗಳ ಸೇವನೆಯಿಂದ ದೈಹಿಕ ಆರೋಗ್ಯ ಮಾತ್ರವಲ್ಲದೆ ಮಾನಸಿಕ, ಸಾಮಾಜಿ–ಕ ಹಾಗೂ ಆರ್ಥಿಕ ಜೀವನವೂ ಹಾಳಾಗುತ್ತದೆ. ಒಮ್ಮೆ ವ್ಯಸನಕ್ಕೆ ಒಳಗಾದ ವ್ಯಕ್ತಿಯ ಭವಿಷ್ಯ ಕತ್ತಲೆಯಾಗುವ ಸಾಧ್ಯತೆ ಹೆಚ್ಚಿದ್ದು, ವಿದ್ಯಾರ್ಥಿಗಳು ಯಾವುದೇ ಕಾರಣಕ್ಕೂ ಇಂತಹ ದುಶ್ಚಟಗಳಿಗೆ ಬಲಿಯಾಗಬಾರದು ಎಂದು ಕಿವಿಮಾತು ಹೇಳಿದರು.ಅವರು ಮಾತನಾಡುತ್ತಾ, ಮಾದಕ ದ್ರವ್ಯಗಳ ಬಳಕೆಯಿಂದ ಕುಟುಂಬಗಳು ಒಡೆಯುತ್ತವೆ, ಅಪರಾಧ ಕೃತ್ಯಗಳು ಹೆಚ್ಚಾಗುತ್ತವೆ ಹಾಗೂ ಸಮಾಜದ ಶಾಂತಿ ಸುವ್ಯವಸ್ಥೆಗೆ ಧಕ್ಕೆ ಉಂಟಾಗುತ್ತದೆ ಎಂದು ತಿಳಿಸಿದರು. ಯುವಕರು ತಮ್ಮ ಅಮೂಲ್ಯ ಸಮಯವನ್ನು ಶಿಕ್ಷಣ, ಕ್ರೀಡೆ, ಸಾಹಿತ್ಯ, ವಿಜ್ಞಾನ ಹಾಗೂ ಸಮಾಜಮುಖಿ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಪ್ರತಿಯೊಬ್ಬ ವಿದ್ಯಾರ್ಥಿಯೂ ತನ್ನ ಕುಟುಂಬದ, ಸಮಾಜದ ಹಾಗೂ ದೇಶದ ಆಸ್ತಿಯಾಗಿದ್ದು, ಉತ್ತಮ ವ್ಯಕ್ತಿತ್ವ ಬೆಳೆಸಿಕೊಳ್ಳುವ ಮೂಲಕ ಸಮಾಜದ ಆದರ್ಶ ನಾಗ–ರಿಕರಾಗಬೇಕು ಎಂದು ಹೇಳಿದರು.ಇದೇ ವೇಳೆ ಮಹಿಳಾ ಸುರಕ್ಷತೆ ಮತ್ತು ಮಹಿಳೆಯರ ಹಕ್ಕುಗಳ ಕುರಿತು ವಿಶೇಷವಾಗಿ ಮಾತನಾಡಿದ ಅವರು, ಮಹಿಳೆಯರ ವಿರುದ್ಧ ನಡೆಯುವ









ದೌರ್ಜನ್ಯ, ಕಿರುಕುಳ ಹಾಗೂ ಅಪರಾಧ ಪ್ರಕರಣಗಳಲ್ಲಿ ಪೊಲೀಸ್ ಇಲಾಖೆ ಸದಾ ಮಹಿಳೆಯರ ಬೆಂಬಲಕ್ಕೆ ನಿಂತಿದ್ದು, ಯಾವುದೇ ಸಮಸ್ಯೆ ಎದುರಾದಲ್ಲಿ ಮಹಿಳೆಯರು ನಿರ್ಭಯವಾಗಿ ಪೊಲೀಸ್ ಇಲಾಖೆಯನ್ನು ಸಂಪರ್ಕಿಸಬೇಕು ಎಂದು ತಿಳಿಸಿದರು. ಮಹಿಳಾ ರಕ್ಷಣೆಗೆ ಸಂಬಂಧಿಸಿದ ಹಲವು ಕಾನೂನುಗಳ ಬಗ್ಗೆ ವಿದ್ಯಾರ್ಥಿಗಳಿಗೆ ಮಾಹಿತಿ ನೀಡಿದರು.

ತಮ್ಮ ಉಪನ್ಯಾಸದಲ್ಲಿ ಸಮಾಜ ಸುಧಾರಕರ ಜೀವನ ಸಾಧನೆಗಳನ್ನು ಉದಾಹರಣೆಯಾಗಿ ಪ್ರಸ್ತಾಪಿಸಿದ ಅವರು, ಅಕ್ಕಮಹಾದೇವಿ ಅವರು ಸಮಾನತೆ, ಮಾನವೀಯತೆ ಹಾಗೂ ಆಧ್ಯಾತ್ಮಿಕ ಮೌಲ್ಯಗಳನ್ನು ಸಾರಿದ ಮಹಾನ್ ವಚನಕಾರ್ತಿ ಎಂದು ವಿವರಿಸಿದರು.ಜಗಜ್ಯೋತಿ ಬಸವಣ್ಣ ಅವರು ಜಾತಿ–ಪಾತಿ, ಅಸಮಾನತೆ ಹಾಗೂ ಮೂಢನಂಬಿಕೆಗಳ ವಿರುದ್ಧ ಹೋರಾಡಿ ಸಮಾನತೆಯ ಸಮಾಜ ನಿರ್ಮಾಣಕ್ಕೆ ಶ್ರಮಿಸಿದ ಮಹಾನ್ ಚಿಂತಕರು ಎಂದು ಹೇಳಿದರು.

ಡಾ. ಎ.ಪಿ.ಜೆ. ಅಬ್ದುಲ್ ಕಲಾಂ ಅವರು ಬಡ ಕುಟುಂಬದಿಂದ ಬೆಳೆದು ದೇಶದ ರಾಷ್ಟ್ರಪತಿಯಾಗುವ ಮೂಲಕ ಯುವಜನತೆಗೆ ಕನಸು ಕಾಣುವ ಹಾಗೂ ಸಾಧಿಸುವ ಪ್ರೇರಣೆಯಾದ ವ್ಯಕ್ತಿತ್ವ ಎಂದು ತಿಳಿಸಿದರು. ಹಾಗೆಯೇ ಡಾ. ಬಿ.ಆರ್. ಅಂಬೇಡ್ಕರ್, ಸ್ವಾಮಿ ವಿವೇಕಾನಂದ, ಮಹಾತ್ಮ ಗಾಂಧೀಜಿ, ಕುವೆಂಪು, ಕಿತ್ತೂರು ರಾಣಿ ಚೆನ್ನಮ್ಮ ಸೇರಿದಂತೆ ಅನೇಕ ಮಹನೀಯರ ಜೀವನದ ಆದರ್ಶಗಳನ್ನು ವಿದ್ಯಾರ್ಥಿಗಳು ಅಳವಡಿಸಿಕೊಳ್ಳಬೇಕು ಎಂದು ಕರೆ ನೀಡಿದರು."ಇತಿಹಾಸವನ್ನು ತಿಳಿಯದವನು ಇತಿಹಾಸವನ್ನು ಸೃಷ್ಟಿಸಲಾರ" ಎಂಬ ಡಾ. ಬಿ.ಆರ್. ಅಂಬೇಡ್ಕರ್ ಅವರ ನುಡಿಯನ್ನು ಉಲ್ಲೇಖಿಸಿದ ಅವರು, ವಿದ್ಯಾರ್ಥಿಗಳು ದೇಶದ ಇತಿಹಾಸ, ಸಂಸ್ಕೃತಿ ಹಾಗೂ ಮಹನೀಯರ ಜೀವನ ಚರಿತ್ರೆಗಳನ್ನು ಅಧ್ಯಯನ ಮಾಡುವ ಮೂಲಕ ಉತ್ತಮ ಬದುಕು ರೂಪಿಸಿಕೊಳ್ಳಬೇಕು ಎಂದು ಹೇಳಿದರು. ಸಮಾಜವನ್ನು ಮಾದಕ ದ್ರವ್ಯ ಮುಕ್ತಗೊಳಿಸುವ ಜವಾಬ್ದಾರಿ ಯುವಜನತೆಯ ಮೇಲಿದೆ ಎಂದು ತಿಳಿಸಿದರು.

ಉಪನ್ಯಾಸದ ಸಂದರ್ಭದಲ್ಲಿ ಸಿಂಧನೂರು ಹಾಗೂ ತಾಲೂಕಿನ ರೌಡಕುಂದ, ಸಾಲಗುಂದ ಹಾಗೂ ಬಳಗಾನೂರು ಹಾಗೂ ಮಸ್ಕಿ ಹಾಗೂ ಮಸ್ಕಿಯಲ್ಲಿ ಮೊನ್ನೆ ಪತ್ತೆಯಾದ ಶಾಸನಗಳ ಬಗ್ಗೆ ಹಾಗೂ ಗ್ರಾಮಗಳ ಐತಿಹಾಸಿಕ ಹಾಗೂ ಸಾಂಸ್ಕೃತಿಕ ವಿಶೇಷತೆಗಳ ಕು–ರಿತು ಮನರಂಜನಾತ್ಮಕವಾಗಿ ವಿವರಿಸಿದ ಅವರು, ವಿದ್ಯಾರ್ಥಿಗಳನ್ನು ನಕ್ಕು ನಲಿಸುತ್ತಾ ಮೌಲ್ಯಯುತ ಸಂದೇಶಗಳನ್ನು ನೀಡಿದರು.ಅವರ ಸರಳ ಹಾಗೂ ಪರಿಣಾಮಕಾರಿ ಉಪನ್ಯಾಸ ವಿದ್ಯಾರ್ಥಿಗಳ ಮೆಚ್ಚುಗೆಗೆ ಪಾತ್ರವಾಯಿತು. ಕಾರ್ಯಕ್ರಮದಲ್ಲಿ ಮಾತನಾಡಿದ ಸಂಸ್ಥೆಯ ಕಾರ್ಯದರ್ಶಿ ಇರ್ಷಾದ್ ಕೆ ಅವರು, ಇತ್ತೀಚಿನ ದಿನಗಳಲ್ಲಿ ಯುವಕರು ಮಾದಕ ವಸ್ತುಗಳ ವ್ಯಸನಕ್ಕೆ ಒಳಗಾಗುತ್ತಿರುವುದು ಆತಂಕಕಾರಿ ಬೆಳವಣಿಗೆಯಾಗಿದೆ.

ಇಂತಹ ದುಶ್ಚಟಗಳಿಂದ ಯುವ ಸಮುದಾಯವನ್ನು ದೂರವಿಡಲು ಜಾಗೃತಿ ಕಾರ್ಯಕ್ರಮಗಳು ಅತ್ಯಗತ್ಯವಾಗಿವೆ ಎಂದು ಹೇಳಿದರು. ವಿದ್ಯಾರ್ಥಿಗಳು ತಮ್ಮ ಜೀವನದ ಗುರಿಯನ್ನು ಸ್ಪಷ್ಟವಾಗಿ ಹೊಂದಿಕೊಂಡು ಶಿಕ್ಷಣದ ಕಡೆ ಹೆಚ್ಚಿನ ಗಮನ ಹರಿಸಬೇಕು. ಸಮಾಜದಲ್ಲಿ ಆರೋಗ್ಯಕರ ಮತ್ತು ಜವಾಬ್ದಾ–ರಿಯುತ ನಾಗರಿಕರಾಗಿ ಬೆಳೆಯಬೇಕು ಎಂದು ಸಲಹೆ ನೀಡಿದರು.ಅದೇ ಸಂದರ್ಭದಲ್ಲಿ ಸಂಸ್ಥೆಯ ಕಾರ್ಯದರ್ಶಿಗಳು ಮಾತನಾಡಿ, ಸನ್ ರೈಸ್ ಶಿಕ್ಷಣ ಸಂಸ್ಥೆಯು ಕೇವಲ ಶೈಕ್ಷಣಿಕ ಚಟುವಟಿಕೆಗಳಿಗೆ ಮಾತ್ರ ಸೀಮಿತವಾಗದೆ ಸಮಾಜಮುಖಿ ಕಾರ್ಯಕ್ರಮಗಳನ್ನು ನಿರಂತರವಾಗಿ ಹಮ್ಮಿಕೊಳ್ಳುತ್ತಿದೆ.

ಮಾದಕ ದ್ರವ್ಯ ಮುಕ್ತ ಸಮಾಜ ನಿರ್ಮಾಣದಲ್ಲಿ ವಿದ್ಯಾರ್ಥಿಗಳ ಪಾತ್ರ ಅತ್ಯಂತ ಮಹತ್ವದ್ದಾಗಿದ್ದು, ಪ್ರತಿಯೊಬ್ಬ ವಿದ್ಯಾರ್ಥಿಯೂ ತನ್ನ ಕುಟುಂಬ, ಸ್ನೇಹಿತರು ಹಾಗೂ ಸಮಾಜದಲ್ಲಿ ಜಾಗೃತಿ ಮೂಡಿಸುವ ಕೆಲಸ ಮಾಡಬೇಕು ಎಂದು ಹೇಳಿದರು. ಇಂತಹ ಉಪಯುಕ್ತ ಮತ್ತು ಪ್ರೇರಣಾದಾಯಕ ಉಪನ್ಯಾಸ ನೀಡಲು ಆಗಮಿಸಿದ ಉಪ ಪೊಲೀಸ್ ವರಿಷ್ಠಾಧಿಕಾರಿಗಳಾದ ಶ್ರೀ ಚಂದ್ರಶೇಖರ್ ಜಿ ಅವರಿಗೆ ಸಂಸ್ಥೆಯ ಅಧ್ಯಕ್ಷರಾದ ಇರ್ಫಾನ್ ಕೆ ಹಾಗೂ ಎಲ್ಲಾ ವಿಭಾಗಗಳ ಪ್ರಾಚಾರ್ಯರು, ಉಪನ್ಯಾಸಕರು ಹಾಗೂ ವಿದ್ಯಾರ್ಥಿಗಳ ಪರವಾಗಿ ಹೃತ್ಪೂರ್ವಕ ಕೃತಜ್ಞತೆಗಳನ್ನು ಸಲ್ಲಿಸಿದರು.ಕಾರ್ಯಕ್ರಮದಲ್ಲಿ ಉಪ ಪೊಲೀಸ್ ವರಿಷ್ಠಾಧಿಕಾರಿಗಳ ಕಚೇ–ರಿಯ ಮಹೇಶ್ ಪೊಲೀಸ್ ಸಿಬ್ಬಂದಿ, ಸಂಸ್ಥೆಯ ವಿವಿಧ ವಿಭಾಗಗಳ ಪ್ರಾಚಾರ್ಯರು, ಉಪನ್ಯಾಸಕರು, ಸಿಬ್ಬಂದಿ ವರ್ಗ ಹಾಗೂ ನೂರಾರು ವಿದ್ಯಾರ್ಥಿಗಳು ಉಪಸ್ಥಿತರಿದ್ದು, ಮಾದಕ ದ್ರವ್ಯ ಮುಕ್ತ ಸಮಾಜ ನಿರ್ಮಾಣದ ಸಂಕಲ್ಪವನ್ನು ಕೈಗೊಂಡರು.ಮಾದಕ ದ್ರವ್ಯ ಮುಕ್ತ ಭಾರತ ? ಆರೋಗ್ಯಕರ ಯುವಜನತೆ, ಸದೃಢ ಸಮಾಜ ಮತ್ತು ಶಕ್ತಿಶಾಲಿ ರಾಷ್ಟ್ರ ನಿರ್ಮಾಣದತ್ತ ಒಂದು ಮಹತ್ವದ ಹೆಜ್ಜೆಯಾಗಿದೆ ಎಂದು ಕಾರ್ಯಕ್ರಮದಲ್ಲಿ ಅಭಿಪ್ರಾಯ ವ್ಯಕ್ತವಾಯಿತು.

# ಶಾಸಕ ಅಪ್ಪಾಜಿ ನಾಡಗೌಡರಿಗೆ ಗೌರವ ಸಮರ್ಪಣೆ

❑ ನೈಜ್ಯ ದೇಸೆ ನ್ಯೂಸ್

**ತಾಳಿಕೋಟಿ: ಪಟ್ಟಣದ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯ ಮುಖ್ಯ ಪ್ರಾಂಗಣದಲ್ಲಿ ರೂ.5 ಕೋಟಿ ಮೊತ್ತದ ವಿವಿಧ ಕಾಮಗಾರಿಗಳಿಗೆ ಭೂಮಿ ಪೂಜೆ ನೆರವೇರಿಸಿ ಅಭಿವೃದ್ಧಿಗೆ ಸಹಕರಿಸಿದ ಕರ್ನಾಟಕ ಸಾಬೂನು ಮತ್ತು ಮಾರ್ಜಕ ನಿಗಮದ ಅಧ್ಯಕ್ಷ,ಶಾಸಕರಾದ ಅಪ್ಪಾಜಿ ನಾಡಗೌಡರಿಗೆ ಸಮಿತಿ ವತಿಯಿಂದ ಗೌರವ ಸಮರ್ಪಣೆ ಸಲ್ಲಿಸಲಾಯಿತು.**

ಈ ಸಂದರ್ಭದಲ್ಲಿ ಧಾರ್ಮಿಕ ಮುಖಂಡ ಸಯ್ಯದ್ ಶಕೀಲ್ ಅಹಮದ್ ಖಾಜಿ,ಬೆಳಗಾವಿ ವಲಯ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರ ವಿಜಯಕುಮಾರ, ಜಿಲ್ಲಾ ಕಾರ್ಯನಿರ್ವಾಹಕ ಅಭಿಯಂತರ ಎಲ್ ಬಿ ಲಮಾಣಿ, ಮುಖಂಡರಾದ ಸುರೇಶ ಧಣಿ ನಾಡಗೌಡ(ಬಿಂಜಲಭಾವಿ),ಸಿದ್ದನಗೌಡ



ಪಾಟೀಲ(ನಾವದಗಿ),ಪ್ರಭುಗೌಡ ಮದರಕಲ್ಲ,ಎಂ.ಎಸ್.ಸರಶಟ್ಟಿ, ಕಾರ್ಯದರ್ಶಿ ಆರ್ ಎಸ್ ರಾಠೋಡ, ಮಹದೇವಪ್ಪ ಕುಂಬಾರ, ಚಿಂತಪ್ಪಗೌಡ ಯಾಳಗಿ,ಕಾಶಿನಾಥ ಮುರಾಳ, ಶ್ರೀಕಾಂತ್ ಎಸ್ ಪಾಟೀಲ, ಸಿ.ಎಸ್. ಮಾಳಿ,ಬಿ.ಎಂ.ಕುಂಬಾರ, ಸಂಗನಗೌಡ ಅಸ್ಕಿ, ಮೋದಿನಸಾ ನಗಾರ್ಚಿ, ಮೆಹಬೂಬ ಕೆಂಭಾವಿ,ಫಯಾಜ ಉತ್ನಾಳ,ಆಸೀಫ ಕೆಂಭಾವಿ,ಗೋಪಾಲ ಕಟ್ಟಿಮನಿ ಹಾಗೂ ಎಪಿಎಂಸಿ ಕಾರ್ಯಾಲಯ ಸಿಬ್ಬಂದಿಗಳು ಇದ್ದರು.

# ಖಾತೆ ಬಗ್ಗೆ ಅಸಮಾಧಾನ ಇಲ್ಲ : ಕೃಷ್ಣಭೈರೇಗೌಡ

❑ ನೈಜ್ಯ ದೇಸೆ ನ್ಯೂಸ್

**ಬೆಂಗಳೂರು: ಗ್ರೇಟರ್ ಬೆಂಗಳೂರು ಅಭಿವೃದ್ಧಿ ಖಾತೆಯ ಬಗ್ಗೆ ತಮಗೆ ಯಾವುದೇ ಅಸಮಾಧಾನವಿಲ್ಲ. ಆದ–'ರೆ ಜವಾಬ್ದಾರಿ ಹಂಚಿಕೆಯಲ್ಲಿ ಸ್ಪಷ್ಟತೆ ಇರಬೇಕೆಂದು ಮುಖ್ಯಮಂತ್ರಿಯವ–ರಿಗೆ ಮನವರಿಕೆ ಮಾಡಿಕೊಟ್ಟಿರುವುದಾಗಿ ಸಚಿವ ಕೃಷ್ಣಭೈರೇ ಗೌಡ ತಿಳಿಸಿದ್ದಾರೆ.**

ವಿಧಾನ ಸೌಧದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬೆಂಗಳೂರಿನ ಜನ, ಪಕ್ಷ ಹಾಗೂ ಮುಖ್ಯಮಂತ್ರಿಯವರ ನಿರೀಕ್ಷೆ ಅಪಾರವಾಗಿದೆ. ನಿರೀಕ್ಷೆಗಳಿಗೆ ತಕ್ಕ ಹಾಗೇ ಜನಪರವಾದ ಸುಧಾರಣೆಯಾಗಬೇಕಾದರೆ, ಜವಾಬ್ದಾರಿಯ ಬಗ್ಗೆ ಸ್ಪಷ್ಟತೆ ಅಗತ್ಯ ಇದೆ ಎಂದು ಹೇಳಿದ್ದಾರೆ. ತಾವು ಯಾವುದೇ



ಜವಾಬ್ದಾರಿ ತೆಗೆದುಕೊಂಡರು ಅದಕ್ಕೆ ಉತ್ತಮ ಫಲಿತಾಂಶ ನೀಡುವ ಉತ್ತರದಾಹಿತ್ವವನ್ನು ರೂಢಿಸಿಕೊಂಡು ಬಂದಿದ್ದೇನೆ. ನನಗೆ ಯಾವುದೇ ರೀತಿಯ ಅಸಮಾಧಾನಗಳಿಲ್ಲ, ಬೆಂಗಳೂರು ನಗರಾಭಿವೃದ್ಧಿ ಸಚಿವ ಸ್ಥಾನ ಎಂಬುವುದು ಅಧಿಕಾರವಲ್ಲ ಕಠಿಣ ಸವಾಲಿನ ಜವಾಬ್ದಾರಿ ಎಂದರು. ಬಿಡಿಎ ಮತ್ತು ಬಿಎಂಆರ್‌ಡಿಎ ಹೊರತಾದ ಗ್ರೇಟರ್ ಬೆಂಗಳೂರು ನಗರಾಭಿವೃದ್ಧಿಯ ಬಗ್ಗೆ ಮುಖ್ಯಮಂತ್ರಿಯವರ ಜೊತೆ ಚರ್ಚೆ ಮಾಡಿದ್ದೇನೆ. ಸಂಪೂರ್ಣವಾದ ಮತ್ತು ಸ್ಪಷ್ಟವಾದ ಜವಾಬ್ದಾರಿ ಇದ್ದರೆ, ಉತ್ತಮವಾಗಿ ಕೆಲಸ ಮಾಡಲು ಸಾಧ್ಯ. ಇಲ್ಲವಾದರೆ ನಿರೀಕ್ಷಿತ ಹಾಗೂ ಫಲಿತಾಂಶ ಆಧರಿತವಾಗಿ ಕೆಲಸ ಮಾಡಲು ಸಾಧ್ಯವಾಗುವುದಿಲ್ಲ. ಇದನ್ನು ಮುಖ್ಯಮಂತ್ರಿಯವರಿಗೆ ಮನವ–ರಿಕೆ ಮಾಡಿಕೊಟ್ಟಿದ್ದು, ಶೀಘ್ರವೇ ತೀರ್ಮಾನ ಮಾಡುತ್ತೇನೆ. ಇ–ಪೇಪರ್ ಜಾಹೀರಾತು ಸ್ಥಳ ಅವರ ನಿರ್ಧಾರದ ಬಳಿಕ ಮುಂದಿನ ಕೆಲಸಗಳನ್ನು ನಿರ್ವಹಿಸುತ್ತೇನೆ ಎಂದಿದ್ದಾರೆ. ಮುಖ್ಯಮಂತ್ರಿಯವರು ದೆಹಲಿಯಲ್ಲಿ ನಿರಂತರವಾದ ಸಭೆಗಳನ್ನು ನಡೆಸಿದ್ದರು.

# ಸ್ವ ಉದ್ಯೋಗ ಪ್ರೇರಣಾ ಶಿಬಿರದ ಮೂಲಕ ಮಹಿಳೆಯರು ಪರಾವಲಂಬಿಯಾಗದೆ–ಸ್ವಾವಲಂಬಿಗಳಾಗಿ ಜೀವನ ನಡೆಸಬೇಕು– ವಸಂತ್ ಎಸ್

❑ ನೈಜ್ಯ ದೇಸೆ ನ್ಯೂಸ್

**ಸಿರುಗುಪ್ಪ ನಗರದ 28ನೇ ವಾರ್ಡಿನ ಅಂಗನವಾಡಿ ಕೇಂದ್ರದಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಮಹಿಳಾ ಜ್ಞಾನವಿಕಾಸ ಕಾರ್ಯಕ್ರಮದಡಿಯಲ್ಲಿ ಮಹಿಳೆಯರು ಸ್ವ–ಉದ್ಯೋಗ ಪ್ರಾರಂಭಿಸಲು ಸ್ವ–ಉದ್ಯೋಗ ಪ್ರೇರಣಾ ಶಿಬಿರ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದು ಕಾರ್ಯಕ್ರಮವನ್ನುತಾಲೂಕು ಕ್ಷೇತ್ರ ಯೋಜನಾಧಿಕಾರಿ ವಸಂತ್ ಎಸ್ ರವರು ಉದ್ಘಾಟನೆ ಮಾಡಿ ನಂತರ ಮಾತನಾಡಿದ ಅವರು ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯು ಮಹಿಳಾ ಜ್ಞಾನವಿಕಾಸ ಕಾರ್ಯಕ್ರಮದಡಿಯಲ್ಲಿ ಮಹಿಳೆಯರಿಗೆ ಮೂರು ತಿಂಗಳ ಹೊಲಿಗೆ ತರಬೇತಿ, ಅಗರಬತ್ತಿ ತಯಾರಿಕೆ,**





ಬತ್ತಿ ತಯಾರಿಕೆ, ಫಿನಾಯಿಲ್ ತಯಾರಿಕೆ, ಬೊಕ್ಕೆ ತಯಾರಿ, ತೋರಣ ತಯಾರಿ, ಬ್ಯೂಟಿಷಿಯನ್ ಹೀಗೆ ಹತ್ತು ಹಲವು ಸ್ವ–ಉದ್ಯೋಗದಿಂದ ಸ್ವಾವಲಂಬಿ ಬದುಕನ್ನು ಕಟ್ಟಿಕೊಳ್ಳುವುದಕ್ಕೆ ಅಗತ್ಯ ತರಬೇತಿ ಹಾಗೂ ಮಾರ್ಗದರ್ಶನವನ್ನು ಮಹಿಳಾ ಜ್ಞಾನವಿಕಾಸ ಕಾರ್ಯಕ್ರಮದಡಿಯಲ್ಲಿ ನಡೆದ ಬಾಗಿಲು ತೋರಣಗಳ ತರಬೇತಿ, ಸೀರೆ ಕುಚ್ಚು ತರಬೇತಿ, ಕೇಂದ್ರದ ಮಹಿಳೆಯರಿಗೆ ತರಬೇತಿಯಿಂದ ಸಾಧ್ಯವಾಗುತ್ತದೆ ಎಂದು ತಿಳಿಸಿದರು.

ನಂತರ ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಪೋಲಿಸ್ ಇಲಾಖೆಯ ಸಿಬ್ಬಂದಿ ಶ್ರೀಮತಿ ನಾಗರತ್ನರವರು ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯು ಸಾಲ ನೀಡುವ ಸಂಸ್ಥೆಯಾಗಿರದೆ ಮಹಿಳೆರು ಇತರೆ ಕುಟುಂಬ ಸದಸ್ಯರನ್ನು ಅವಲಂಬಿಸದೆ ಸ್ವಂತ ಕೆಲಸ ಮಾಡಿ ಸ್ವಾವಲಂಬಿಗಳಾಗಿ ಜೀವನ ನಡೆಸಬೇಕು, ಇದಕ್ಕಾಗಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯು ಹಲವಾರು ಯೋಜನೆಗಳನ್ನ ರೂಪಿಸಿದ್ದು ಮಾಸಿಕವಾಗಿ ನಡೆಯುವ ಜ್ಞಾನವಿಕಾಸ ಕೇಂದ್ರ ಸಭೆಗಳಿಗೆ ಭಾಗವಹಿಸಿ ಮಾಹಿತಿ ಪಡೆದುಕೊಳ್ಳುವಂತೆ ತಿಳಿಸಿದರು. ಕಾರ್ಯಕ್ರಮದಲ್ಲಿ ತರಬೇತಿದಾರರು ಶ್ರೀಮತಿ ನವೀನ ಅವರು ಸದಸ್ಯರಿಗೆ ಸೀರೆ ಕುಚ್ಚು ತರಬೇತಿ ಹಾಗೂ ಬಾಗಿಲು ತೋರಣ ತರಬೇತಿಯನ್ನು ನೀಡಿದರು.

ಕಾರ್ಯಕ್ರಮದಲ್ಲಿ ಒಕ್ಕೂಟದ ಅಧ್ಯಕ್ಷೆ ನರಸಮ್ಮ , ಜ್ಞಾನವಿಕಾಸ ಸಮನ್ವಯಾಧಿಕಾರಿ ಪ್ರಿಯಾ, ಸೇವಾಪ್ರತಿನಿಧಿ ಕಲ್ಪನಾ ಜ್ಞಾನವಿಕಾಸ ಕೇಂದ್ರದ ಸದಸ್ಯರು ಉಪಸ್ಥಿತರಿದ್ದರು. ವರದಿ : ಮಸೀದಿ ,ಅಬ್ದುಲ್ ಗೌಸ್, ಸಿರುಗುಪ್ಪ

## ಸಾಹಿತ್ಯ ಸಿಂಚನ

### ರಕ್ತದಾನ

ರಕ್ತದಾನವು ಮಹಾದಾನ,
ಜೀವ ಉಳಿಸುವ ಪವಿತ್ರ ಕಾರ್ಯಧಾನ?
ನಿನ್ನ ಒಂದು ಹನಿ ರಕ್ತದಿಂದ,
ಮುಗುಳ್ನಗೆ ಮೂಡುತ್ತದೆ ಯಾರಾದರೊಬ್ಬರ
ಮುಖದಿಂದ?

ಅಪಘಾತದ ನೋವಿನಲ್ಲಿ ನರಳುವವರಿಗೆ,
ಆಶೆಯ ಬೆಳಕಾಗು ನೀನು ಅವರ ಬದುಕಿಗೆ?
ನೀ ಕೊಟ್ಟ ದಾನ ಮರೆಯಲಾಗದು,
ಜೀವನದ ದೀಪ ಮತ್ತೆ ಆರಲಾಗದು?

ಧರ್ಮ ಜಾತಿ ಬೇಧವಿಲ್ಲ ಇಲ್ಲಿ,
ಮಾನವತೆ ಮಾತ್ರ ಮಾತಾಡುತ್ತದೆ ಎಲ್ಲೆಲ್ಲಿ?
ರಕ್ತದಾನ ಮಾಡುವ ಕೈಗಳು ಶ್ರೇಷ್ಠ,
ಪ್ರೀತಿ–ಕರುಣೆಯ ಸಂಕೇತ ಅತಿಶ್ರೇಷ್ಠ?

ಬನ್ನಿ ಎಲ್ಲರೂ ಸಂಕಲ್ಪ ಮಾಡೋಣ,
ರಕ್ತದಾನದಿಂದ ಜೀವ ಉಳಿಸೋಣ?
ಒಂದು ದಾನದಿಂದ ಅನೇಕ ಜೀವ,
ಇದೇ ಮಾನವತ್ವದ ಸತ್ಯದ ಜೀವ?

ಯಾಸೀನಾ ಇರ್ಫಾನ್ ಸಿಂಧನೂರು

## ಹೃತ್ಪೂರ್ವಕ ಕೃತಜ್ಞತೆಗಳು



ಹಂಪನಗೌಡ ಬಾದರ್ಲಿ , ಶಾಸಕರು ಸಿಂಧನೂರು ವಿಧಾನ ಸಭಾ ಕ್ಷೇತ್ರ



ಬಾಬಾಗೌಡ ಬಾದರ್ಲಿ , ಅಧ್ಯಕ್ಷರು ನಗರಾಭಿವೃದ್ಧಿ ಪ್ರಾಧಿಕಾರ ಸಿಂಧನೂರು

❑ ನೈಜ್ಯ ದೆಸೆ ನ್ಯೂಸ್

" ಹಂಪನಗೌಡ.ಬಾದರ್ಲಿ ಅಭಿಮಾನಿಗಳ ಬಳಗ" ದ ವತಿಯಿಂದ ನಿನ್ನೆಯ ದಿನ ಅಂದರೆ, 12/06/2026 ಶುಕ್ರವಾರದಂದು, ನಮ್ಮ ನಿಮ್ಮೆಲ್ಲರ ನೆಚ್ಚಿನ ನಾಯಕರು ಹಾಗೂ ಶಾಸಕರಾದ ಮಾನ್ಯ ಶ್ರೀ ಹಂಪನಗೌಡ ಬಾದರ್ಲಿ ಅವರಿಗೆ ಸಚಿವ ಸ್ಥಾನ ದೊರಕಲಿ ಎಂದು, ಸಿಂಧನೂರಿನ ಗಣೇಶ ಗುಡಿಯಿಂದ, ಅಂಬಾಮಠದ(ಸಿದ್ಧ ಪರ್ವತದ) ಶಕ್ತಿ ದೇವತೆಯಾದ ಅಂಬಾ ದೇವಿಯ ದರ್ಶನ ಪಡೆಯಲು ಹಾಗೂ ಅಂಬಾದೇವಿ ದೇವಸ್ಥಾನದಲ್ಲಿ ಸಾವಿರದ ಎಂಟು ತೆಂಗಿನಕಾಯಿ ಹೊಡೆಯುವ ಮುಖಾಂತರ ಹರಕೆಯನ್ನು ತೀರಿಸಲು, ಪಾದಯಾತ್ರೆಯಲ್ಲಿ ಪಾಲ್ಗೊಳ್ಳುವ ಮೂಲಕ ಅಂಬಾಮಠಕ್ಕೆ ಆಗಮಿಸಿದ ಹಾಗೂ ಈ ಪಾದಯಾತ್ರೆಗೆ ಎಲ್ಲಾ ರೀತಿಯಿಂದಲೂ ಸಹಾಯ ಮತ್ತು ಸಹಕಾರ ನೀಡಿರುವ ತಮಗೆ, ವೈಯಕ್ತಿಕವಾಗಿ ಹಾಗೂ "ಹಂಪನಗೌಡ ಬಾದರ್ಲಿ ಅಭಿಮಾನಿ ಬಳಗ" ದ ವತಿಯಿಂದ, ಹೃತ್ಪೂರ್ವಕ ಕೃತಜ್ಞತೆಗಳು.

**ನೈಜ್ಯ ದೆಸೆ ಕನ್ನಡ ದಿನಪತ್ರಿಕೆಯನ್ನು ತಪ್ಪದೆ ಓದಿರಿ.**

# ಯುವಕರು ರಕ್ತದಾನ ಮಾಡಿ ಜೀವ ರಕ್ಷಿಸಿ: ಪ್ರಭುಲಿಂಗ ಶ್ರೀ

❑ ನೈಜ್ಯ ದೆಸೆ ನ್ಯೂಸ್

**ತಾಳಿಕೋಟಿ: ಸಕಲ ದಾನಗಳಲ್ಲಿ ರಕ್ತದಾನ ಶ್ರೇಷ್ಠವಾಗಿದ್ದು ಮಹಾದಾನ ಎನಿಸಿಕೊಂಡಿದೆ. ಆರೋಗ್ಯವಂತರೆಲ್ಲರೂ ರಕ್ತದಾನ ಮಾಡುವ ಮೂಲಕ ಹಲವಾರು ಜೀವಗಳನ್ನು ಉಳಿಸಬಹುದಾಗಿದೆ ಎಂದು ಹಿಕ್ಕನಗುತ್ತಿ ಬಸವ ಮಹಾಮಠದ ಪೀಠಾಧಿಪತಿ ಪೂಜ್ಯ ಶ್ರೀ ಪ್ರಭುಲಿಂಗ ಮಹಾಸ್ವಾಮಿಗಳು ಹೇಳಿದರು.**

ಪಟ್ಟಣದ ರಾಜವಾಡೆ ಆವರಣದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ವಿಜಯಪುರ, ಜಿಲ್ಲಾ ರಕ್ತ ನಿಧಿ ಕೇಂದ್ರ ವಿಜಯಪುರ, ಸಮುದಾಯ ಆರೋಗ್ಯ ಕೇಂದ್ರ ತಾಳಿಕೋಟಿ ಹಾಗೂ ಶ್ರೀ ವೀರರಾಣಿ ಕಿತ್ತೂರು ಚೆನ್ನಮ್ಮ ಮೂರ್ತಿ ಪ್ರತಿಷ್ಠಾಪನಾ ಸಮಿತಿ ಇವರ ಸಹಯೋಗದಲ್ಲಿ ಶನಿವಾರ ಹಮ್ಮಿಕೊಂಡಿದ್ದ ರಕ್ತದಾನ ಶಿಬಿರಕ್ಕೆ ಚಾಲನೆ ನೀಡಿ ಅವರು ಮಾತನಾಡಿ ರಕ್ತವನ್ನು ಕೃತಕವಾಗಿ ತಯಾರಿಸಲು ಇದುವರೆಗೂ ಸಾಧ್ಯವಾಗಿಲ್ಲ.



ಒಬ್ಬರ ರಕ್ತವನ್ನು ಮತ್ತೊಬ್ಬ–ರಿಗೆ ನೀಡಿಯೇ ಜೀವ ಉಳಿಸಬೇಕು. ರಕ್ತದಾನ ಮಾಡುವುದರಿಂದ ಆರೋಗ್ಯ ಉತ್ತಮವಾಗಿರುತ್ತದೆ ಅಲ್ಲದೆ ಅದರಿಂದ ಯಾವುದೇ ಹಾನಿ ಉಂಟಾಗುವುದಿಲ್ಲ ಬದಲಾಗಿ ರೋಗಿಗಳಿಗೆ ಅದು ವರದಾನವಾಗುತ್ತದೆ ಎಂದ ಅವರು ಮೂರ್ತಿ ಪ್ರತಿಷ್ಠಾಪನೆಯ ಮೂರನೇ ವಾರ್ಷಿಕೋತ್ಸವದ ಈ ಸಂದರ್ಭದಲ್ಲಿ ಇಂತಹ ಕಾರ್ಯಕ್ರಮವನ್ನು ಆಯೋಜಿಸಿರುವ ಸಮಿತಿಯ ಅಧ್ಯಕ್ಷರಾದ ನೀಲಮ್ಮಗೌಡ್ತಿ ಪಾಟೀಲ ಹಾಗೂ ಅವರ ಇಡೀ ಬಳಗಕ್ಕೆ ಅಭಿನಂದಿಸುತ್ತೇನೆ ಎಂದರು. ಸಮಿತಿಯ ಅಧ್ಯಕ್ಷೆ ನೀಲಮ್ಮಗೌಡ್ತಿ ಪಾಟೀಲ ಅವರು ಮಾತನಾಡಿ ಈ ಬಾರಿ ವಾರ್ಷಿಕೋತ್ಸವವನ್ನು ವಿಶೇಷವಾಗಿ ಆಚರಿಸಲಾಗುತ್ತಿದೆ ಪ್ರತಿದಿನವೂ ವಿವಿಧ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ ಇದರ ಯಶಸ್ವಿಗೆ ತಮ್ಮೆಲ್ಲರ ಸಹಕಾರ ಇರಲಿ ಎಂದರು. ಶಿಬಿರದಲ್ಲಿ 18 ಯೂನಿಟ್ ರಕ್ತವನ್ನು ಸಂಗ್ರಹ ಮಾಡಲಾಯಿತು. ರಕ್ತ ನೀಡಿದ ದಾನಿಗಳಿಗೆ ಪ್ರಶಸ್ತಿ ಪತ್ರಗಳನ್ನು ವಿತರಿಸಲಾಯಿತು.

ಸಮಿತಿಯ ಗೌರವ ಅಧ್ಯಕ್ಷ ಚಂದ್ರಶೇಖರ ಪಾಟೀಲ, ತಾಳಿಕೋಟಿ ಸಮುದಾಯ ಆರೋಗ್ಯ ಕೇಂದ್ರದ ಆಪ್ತ ಸಮಾಲೋಚಕ ಮಲ್ಲನಗೌಡ ದ್ಯಾಪೂರ, ನ್ಯಾಯವಾದಿ ಗುರುಪಾದ ಮಾರ್ಸನಳ್ಳಿ, ಶರಣಗೌಡ ಬಿರಾದಾರ ಮಿಣಜಗಿ, ಶಿವರಾಜ ಪಾಟೀಲ,ರೇಣುಕಾ ಬಿರಾದಾರ,ಡಾ. ಅರಸಿದ್ದ ಮುಂಡರಗಿ, ಬಸವರಾಜ ಅಗ್ನಿ, ಅರುಣ–ಕುಮಾರ, ದಿಲೀಪ ಸಿಂಗೆ, ಪ್ರಕಾಶ, ಅನ್ನಪೂರ್ಣ ಹಿರೇಗೌಡರ, ಸಿದ್ದಮ್ಮ ಬ್ಯಾಲ್ಯಾಳ, ಕಾಶಿಬಾಯಿ ಶರಣ ವಿದ್ಯಾ ನಾಡಕರಣಿ, ದೇವಕಿ ಮಾಯಾಚಾರಿ, ಲಕ್ಷ್ಮೀಬಾಯಿ ಚಳೇಕಾರ, ನಿಂಗಮ್ಮ ತಂಗಡಗಿ, ಶಿವಲೀಲಾ ಲಿಂಗದಳ್ಳಿ, ನಾಗಮ್ಮ ಪಾಟೀಲ ಹಾಗೂ ಸಮಿತಿಯ ಪದಾಧಿಕಾರಿಗಳು ಇದ್ದರು.

# ನೆಲೆ ಇಲ್ಲದ ಮಸ್ಕಿಯ ಹನುಮಂತಪ್ಪನಿಗೆ ಆಸರೆಯಾದ ಕಾರುಣ್ಯ ಕುಟುಂಬ



❑ ನೈಜ್ಯ ದೆಸೆ ನ್ಯೂಸ್

**ಸಿಂಧನೂರು: ಮಸ್ಕಿ ಪಟ್ಟಣದ ಸರ್ಕಾರಿ ಹಿರಿಯ ಕೇಂದ್ರ ಪ್ರಾಥಮಿಕ ಶಾಲೆಯ ಆವರಣದಲ್ಲಿ ಸುಮಾರು ದಿನಗಳಿಂದ ವಾಸವಾಗಿದ್ದ ಹನುಮಂತಪ್ಪ ವಯಸ್ಸು–75 ಈತನನ್ನು ಮಸ್ಕಿ ಪೊಲೀಸ್ ಇಲಾಖೆ ಅಧಿಕಾ–ರಿಗಳ ಹಾಗೂ ಶಾಲಾ ಶಿಕ್ಷಕರುಗಳ ಮತ್ತು ಸ್ಥಳೀಯರುಗಳ ಮಾಹಿತಿ ಮೇರೆಗೆ ಸಿಂಧನೂರು ನಗರದ ಒಳಬಳ್ಳಾರಿ ರಸ್ತೆಯಲ್ಲಿರುವ ಕಾರುಣ್ಯ ನೆಲೆ ವೃದ್ಧಾಶ್ರಮದ ಕಾರ್ಯಾಧ್ಯಕ್ಷರಾದ ಡಾ. ಚನ್ನಬಸವ ಸ್ವಾಮಿ ಹಿರೇಮಠ ಅವರು ಆಶ್ರಮಕ್ಕೆ ಕರೆತಂದು ಆಶ್ರಯ ಕಲ್ಪಿಸಿಕೊಟ್ಟರು.**

ಈ ಸಮಯದಲ್ಲಿ ಜಿ. ಎಚ್. ಪಿ. ಎಸ್. ಕೇಂದ್ರ ಶಾಲೆಯ ಶಿಕ್ಷಕರಗಳು ಹಾಗೂ ಸ್ಥಳೀಯರುಗಳು ಆಶ್ರಮಕ್ಕೆ ಧನ ಸಹಾಯ ಮಾಡುವುದರ ಮೂಲಕ ಮಾನವೀಯತೆ ಮೆರೆದರು. ಈ ಸಂದರ್ಭದಲ್ಲಿ ಆಶ್ರಮದ ಕಾರ್ಯಾಧ್ಯಕ್ಷರಾದ ಡಾ.ಚನ್ನಬಸವ ಸ್ವಾಮಿ ಹಿರೇಮಠ ಮಾತನಾಡಿ ಹನುಮಂತಪ್ಪ ಅವರಿಗೆ ಕುಟುಂಬ ಇರೋದಿಲ್ಲ ಅವರು ಆರೋಗ್ಯವಾಗಿದ್ದಾಗ ಹೋಟೆಲ್ ಒಂದರಲ್ಲಿ ಕೆಲಸ ಮಾಡಿ ಜೀವನ ಸಾಗಿಸುತ್ತಿದ್ದರು. ಆದ–'ರೆ ಈಗಿನ ದಿನಗಳಲ್ಲಿ ಅವರ ದೇಹದಲ್ಲಿ ಶಕ್ತಿ ಇಲ್ಲದಂತಾಗಿ ನಿಸ್ಸಾಯಕರಾಗಿರುವ ಇವರನ್ನು ಇಷ್ಟು ದಿನಗಳ ಕಾಲ ಇವರ ಸೇವೆ ಮಾಡಿರುವ ಪ್ರತಿಯೊಬ್ಬರಿಗೂ ಕೂಡ ಕಾರುಣ್ಯ ಕುಟುಂಬದ ವತಿಯಿಂದ ಧನ್ಯವಾದಗಳು.

ನಮ್ಮ ಕಾರುಣ್ಯ ಸಂಸ್ಥೆಯೂ ನೆಲೆ ಇಲ್ಲದ ನೊಂದ ಜೀವಿಗಳಿಗೆ ದಾನಿಗಳ ಸಹಾಯ ಸಹಕಾರದೊಂದಿಗೆ ಮಾಡುತ್ತಿರುವ ಈ ಕಾರ್ಯಕ್ಕೆ ಸಹಾಯದ ಮೂಲಕ ಸಹಕ–ರಿಸಿತ್ತಿರುವ ದಾನಿಗಳಿಗೆ ಪುಣ್ಯ ಪ್ರಾಪ್ತಿಯಾಗಲಿ ಎನ್ನುವುದು ನಮ್ಮ ಸಂಸ್ಥೆಯ ಮೂಲ ಉದ್ದೇಶವಾಗಿದೆ. ಮಸ್ಕಿ ತಾಲೂಕಿನಲ್ಲಿ ಸುಮಾರು ಜನರಿಗೆ ಆಶ್ರಯ ನೀಡಿದ ನಮ್ಮ ಕಾರುಣ್ಯ ಆಶ್ರಮಕ್ಕೆ ಮಸ್ಕಿ ವಿಧಾನಸಭಾ ಕ್ಷೇತ್ರದ ಶಾಸಕರು ಒಮ್ಮೆಯೂ ಕೂಡ ಭೇಟಿ ನೀಡಿರುವುದಿಲ್ಲ. ಆದ್ದರಿಂದ ಈಗಲೂ ಕೂಡ ನಮ್ಮ ಶಾಸಕರಲ್ಲಿ ನಾವು ಕೈ ಮುಗಿದು ವಿನಂತಿಸಿಕೊಳ್ಳುವುದೇನೆಂದರೆ ಆಶ್ರಮದ ವಾಸ್ತವ ಸ್ಥಿತಿಯನ್ನು ನೋಡಿ ಆಶ್ರಮಕ್ಕೆ ಬೇಕಾಗಿರುವ ಸ್ವಂತ ಜಾಗ ಹಾಗೂ ಸೌಲಭ್ಯಗಳನ್ನು ಒದಗಿಸಿದರೆ ಇನ್ನೂ ಹೆಚ್ಚಿನ ಸೇವೆಯನ್ನು ಸಮಾಜಕ್ಕೆ ನಮ್ಮ ಕಾರುಣ್ಯ ಸಂಸ್ಥೆಯು ಒದಗಿಸುತ್ತದೆ ಎಂದು ಭಾವನಾತ್ಮಕವಾಗಿ ಮಾತನಾಡಿ ಹನುಮಂತಪ್ಪನನ್ನು ಸಿಬ್ಬಂದಿಗಳೊಂದಿಗೆ ಸ್ವಚ್ಛಗೊಳಿಸಿ ಆಶ್ರಮಕ್ಕೆ ಕರೆದುಕೊಂಡು ಹೋಗಿ ಆಶ್ರಯ ಕೊಟ್ಟರು.

ಈ ಸಮಯದಲ್ಲಿ ಪೊಲೀಸ್ ಎ. ಎಸ್. ಐ. ಅಧಿಕಾರಿಗಳಾದ ಸೂರನಗೌಡ ಬಸನಗೌಡ.ಹಾಗೂ ರಾಮಸ್ವಾಮಿ ಸಿ. ಆರ್. ಪಿ. ಮಸ್ಕಿ ಸಿ. ಆರ್. ಸಿ. ಮೋಹನ್ ಬಾವಿಮನಿ ಶಿಕ್ಷಕರು ಜಿ. ಎಚ್. ಪಿ. ಎಸ್. ಕೇಂದ್ರಶಾಲೆ ಮಸ್ಕಿ. ಹಾಗೂ ಪರಶುರಾಮ್ ವಕೀಲರು ಮಸ್ಕಿ. ವೀರೇಶ ಈಶ್ವರಪ್ಪ ಮಸ್ಕಿ. ನಾರಾಯಣಪ್ಪ ಬೋವಿ. ವೀರಭದ್ರಪ್ಪ ಉದ್ಯಮಿಗಳು. ಸತೀಶ್ ಕವಿತಾಳ. ಮಹಮ್ಮದ್ ಬಳಗಾನೂರು ಶುಕ್ರುದ್ದೀನ್ ಮುಖ್ಯೋಪಾಧ್ಯಾಯರು..ರೇಣುಕಾ ಶಿಕ್ಷಕಿಯರು.ಹಾಗೂ ಆಶ್ರಮದ ಸಿಬ್ಬಂದಿಗಳಾದ ಮರಿಯಪ್ಪ. ಹರ್ಷವರ್ಧನ. ಹಾಗೂ ಹಲವಾರು ಸ್ಥಳೀಯರುಗಳು ಉಪಸ್ಥಿತರಿದ್ದರು

## ಕಂಪ್ಲಿ ಮಂಡಲದ ಉಪಾಧ್ಯಕ್ಷರಾಗಿ ಬಿ. ರಮೇಶ, ಕಂಪ್ಲಿ ಮಂಡಲ ಯುವ ಮೋರ್ಚಾ ಅಧ್ಯಕ್ಷರಾಗಿ ಬಡಿಗೇರ್ ವಿರೇಶ ನೇಮಕ

❑ ನೈಜ್ಯ ದೆಸೆ ನ್ಯೂಸ್

**ಬಳ್ಳಾರಿ / ಕಂಪ್ಲಿ : ಕಂಪ್ಲಿ ಮಂಡಲದ ಉಪಾಧ್ಯಕ್ಷರಾಗಿ ಬಿ. ರಮೇಶ ಹಾಗೂ ಕಂಪ್ಲಿ ವಿಧಾನಸಭಾ ಕ್ಷೇತ್ರದ ಭಾರತೀಯ ಜನತಾ ಪಾರ್ಟಿಯ ಕಂಪ್ಲಿ ಮಂಡಲದ ಯುವ ಮೋರ್ಚಾ ಅಧ್ಯಕ್ಷರಾಗಿ ಬಡಿಗೇರ್ ವಿರೇಶ ನೇಮಕ ಇವರು ನೇಮಕಗೊಂಡಿದ್ದು, ಮಾಜಿ ಶಾಸಕ ಟಿ.ಎಚ್.ಸುರೇಶ ಬಾಬು ನೇತೃತ್ವದಲ್ಲಿ ಕಂಪ್ಲಿ ಮಂಡಲ ಅಧ್ಯಕ್ಷ ಸಿ.ಡಿ.ಮಹಾದೇವ ಸಮ್ಮುಖದಲ್ಲಿ ಪಟ್ಟಣದ ತುಂಗಭದ್ರ ಕಾರ್ಯಾಲಯದಲ್ಲಿ ನೇಮಕಾತಿ ಆದ–'ೀಶ ಪ್ರತಿಗಳನ್ನು ಶನಿವಾರ ವಿತರಿಸಲಾಯಿತು.**

ಕೂಡಲೇ ತಮ್ಮ ಅಧಿಕಾರದ ಜವಾಬ್ದಾರಿಯನ್ನು ಸ್ವೀಕರಿಸಿ, ಪಕ್ಷದ ಶಿಸ್ತು, ತತ್ವ, ಸಿದ್ಧಾಂತಗಳಿಗೆ ಬದ್ಧರಾಗಿ ಮತ್ತು ಸಿದ್ಧಾಂತಗಳನ್ನು ಮೈಗೂಡಿಸಿಕೊಂಡು, ಮುಂದಿನ ವರ್ಷದ ಅವಧಿಯಲ್ಲಿ ಪಕ್ಷದ ಸಂಘಟಣೆಯತ್ತ ಹೆಚ್ಚಿನ ಗಮನಹರಿಸಿ ಕಾರ್ಯಕರ್ತರಿಗೆ, ಸ್ಪೂರ್ತಿಯಾಗಿ, ಶಕ್ತಿಯಾಗಿ, ರಾಜಕೀಯವಾಗಿ, ಸಾಮಾಜಿಕವಾಗಿ, ಪಕ್ಷದ ಹಿತದೃಷ್ಟಿಯಿಂದ ಪಕ್ಷದ ಒಳಿತಿಗಾಗಿ ಪಕ್ಷದ ಸರ್ವತೋಮುಖ ಅಭಿವೃದ್ಧಿಗಾಗಿ ಪ್ರಮಾಣಿಕವಾಗಿ ಕೆಲಸ ನಿರ್ವಹಿಸಬೇಕು. ಮತ್ತು ಅವಧಿಯಲ್ಲಿ ಪಕ್ಷದ ಸಂಘಟನೆಯನ್ನು ಸದೃಢವಾಗಿ ಮತ್ತು ಅತ್ಯಂತ ಬಲಿಷ್ಠವಾಗಿ ಕಟ್ಟಲು ನಿಮ್ಮ ಪರಿಶ್ರಮ ಹಾಗೂ ಸಮಯ ಅತ್ಯವಶ್ಯವಾಗಿದೆ ಎಂದು ಆದೇಶದಲ್ಲಿ ಸೂಚಿಸಲಾಗಿದೆ.



ನೂತನ ಉಪಾಧ್ಯಕ್ಷ ಬಿ. ರಮೇಶ ಆದೇಶ ಪ್ರತಿ ಸ್ವೀಕರಿಸಿದ ನಂತರ ಮಾತನಾಡಿ, ಮಾಜಿ ಶಾಸಕ ಸುರೇಶಬಾಬು ಅವರ ಆದೇಶದ ಮೇರೆಗೆ ಕಂಪ್ಲಿ ಮಂಡಲ ಅಧ್ಯಕ್ಷ ಸಿ.ಡಿ.ಮಹಾದೇವ ಅವರು ನಮ್ಮನ್ನು ಗುರುತಿಸಿ, ಕಂಪ್ಲಿ ಮಂಡಲ ಉಪಾಧ್ಯಕ್ಷರನ್ನಾಗಿ ನೇಮಕ ಮಾಡಿರುವುದು ಖುಷಿ ತಂದಿದೆ. ಈ ಜವಬ್ದಾರಿಗೆ ತಕ್ಕಂತೆ ಪಕ್ಷದ ಏಳಿಗೆಗಾಗಿ ಹಗಲಿರುಳು ಶ್ರಮಿಸಲಾಗುವುದು. ಕಂಪ್ಲಿ ಮಂಡಲದಲ್ಲಿ ಹೆಚ್ಚಿನ ಮಟ್ಟದಲ್ಲಿ ಕಾರ್ಯಗಳೊಂದಿಗೆ ಕೇಂದ್ರ ಸರ್ಕಾರದ ಯೋಜನೆಗಳು, ಮಾಜಿ ಶಾಸಕ ಸುರೇಶಬಾಬು ಅವರ ಜನಪರ ಅಭಿವೃದ್ಧಿ ಕಾರ್ಯಗಳನ್ನು ಜನರಲ್ಲಿ ಮನದಟ್ಟು ಮಾಡುವ ಮೂಲಕ ಮುಂದಿನ ಚುನಾವಣೆಯಲ್ಲಿ ಬಿಜೆಪಿ ಗೆಲುವಿಗೆ ಶ್ರಮಿಸಲಾಗುವುದು ಎಂದರು.

ಈ ಸಂದರ್ಭದಲ್ಲಿ ಜಿಲ್ಲಾಧ್ಯಕ್ಷ ಅನೀಲ್‌ಕುಮಾರ ಮೋಕಾ, ಎಸ್.ಟಿ ಮೋರ್ಚದ ನೂತನ ಅಧ್ಯಕ್ಷ ಎಸ್ ಈರಣ್ಣ, ಪ್ರಧಾನ ಕಾರ್ಯದರ್ಶಿಗಳಾದ, ಕಟ್ಟೆ ವಿಶ್ವಾನಾಥ, ಉಪ್ಪಾರಹಳ್ಳಿ ಮುನಿಯಪ್ಪ, ಬೆಳಗೋಡ್ ನಾಗರಾಜ, ಮುಖಂಡರಾದ ಸುಗ್ಗೇನಹಳ್ಳಿ ರಾಮಾಂಜಿನಿ, ಜಿ.ಹನುಮಂತ, ಚಟ್ಲೇ ಜಡೆಪ್ಪ, ನರ?ಗುಂಟಿ ಮುದಿಯಪ್ಪ, ಕುಮಾರಸ್ವಾಮಿ, ರಾಮಾಲಿಸ್ವಾಮಿ, ಹೊನ್ನಳ್ಳಿ ವಿರೇಶ, ನೂರ್‌ವಂದಪ್ಪ, ಮಲ್ಲನಗೌಡ ಸುಗ್ಗೇನಹಳ್ಳಿ ಸೇರಿದಂತೆ ಬಿಜೆಪಿಯ ವಿವಿಧ ವಿಭಾಗದ ಪದಾಧಿಕಾರಿಗಳು ಉಪಸ್ಥಿತರಿದ್ದರು.

# ಸಂಚಾರ ಕ್ಷೇತ್ರದಲ್ಲಿ ಹೊಸ ಕ್ರಾಂತಿಗೆ ಭಾರತ ಸಜ್ಜು, ಮುಂದಿನ ವರ್ಷ ಬುಲೆಟ್ ಟ್ರೈನ್ ಸೇವೆ ಆರಂಭ

❑ ನೈಜ್ಯ ದೆಸೆ ನ್ಯೂಸ್

**ನವದೆಹಲಿ: ಭಾರತದ ಮೊದಲ ಬುಲೆಟ್ ರೈಲು ಯೋಜನೆ ಇದೀಗ ಸಂಪೂರ್ಣ ಆಗುವ ಹಂತಕ್ಕೆ ತಲುಪಿದ್ದು, 2027ರ ಆಗಸ್ಟ್ 15ರಂದು ಮೊದಲ ಹಂತದ ಸೇವೆ ಆರಂಭವಾಗುವ ನಿರೀಕ್ಷೆಯಿದೆ. ಜಪಾನ್‌ನ ಪ್ರಸಿದ್ಧ ಶಿಂಕನ್ಸೆನ್ ತಂತ್ರಜ್ಞಾನವನ್ನು ಆಧರಿಸಿದ ಮುಂಬೈ–ಅಹಮದಾಬಾದ್ ಹೈ–ಸ್ಪೀಡ್ ರೈಲು ಕಾರಿಡಾರ್ ದೇಶದ ರೈಲು ಸಂಚಾರ ಕ್ಷೇತ್ರದಲ್ಲಿ ಹೊಸ ಅಧ್ಯಾಯ ಬರೆಯಲಿದೆ.**

ಕೇಂದ್ರ ರೈಲ್ವೆ ಇಲಾಖೆ ಸಚಿವ ಅಶ್ವಿನಿ ವೈಷ್ಣವ್ ಅವರ ಪ್ರಕಾರ, ಸ್ವಾತಂತ್ರ್ಯ ದಿನಾಚರಣೆಯಂದು ಮೊದಲ ಹಂತದ ಸೇವೆಗೆ ಚಾಲನೆ ನೀಡಲಾಗುತ್ತದೆ. ಒಟ್ಟು 508 ಕಿಲೋಮೀಟರ್ ಉದ್ದದ ಈ ಮಾರ್ಗವು ಭಾರತದ ಮೊದಲ ಸಮರ್ಪಿತ ಹೈ–ಸ್ಪೀಡ್ ರೈಲು ಕಾರಿಡಾರ್ ಆಗಿದೆ.ಈ ಯೋಜನೆ ಸಂಪೂರ್ಣ ಕಾರ್ಯಾರಂಭ ಮಾಡಿದ ಬಳಿಕ ಮುಂಬೈ ಮತ್ತು ಅಹಮದಾಬಾದ್ ನಡುವಿನ ಪ್ರಯಾಣವನ್ನು ಎರಡು ಗಂಟೆಗಳೊಳಗೆ ಪೂರ್ಣಗೊಳಿಸಲು ಸಾಧ್ಯವಾಗಲಿದೆ.




ಪ್ರಸ್ತುತ ರೈಲು ಪ್ರಯಾಣಕ್ಕೆ ಬೇಕಾಗುವ ಸಮಯಕ್ಕೆ ಹೋಲಿಸಿದರೆ ಇದರಿಂದ ದೊಡ್ಡ ಮಟ್ಟದಲ್ಲಿ ಸಮಯ ಉಳಿತಾಯ ಆಗಲಿದೆ. ಯೋಜನೆಯನ್ನು ಹಂತ ಹಂತವಾಗಿ ಪೂರ್ಣಗೊಳಿಸಲಾಗುತ್ತಿದ್ದು, 2029ರ ಅಂತ್ಯದೊಳಗೆ ಸಂಪೂರ್ಣ ಕಾ–ರಿಡಾರ್ ಕಾರ್ಯರೂಪಕ್ಕೆ ಬರುವ ಗುರಿ ಹೊಂದಲಾಗಿದೆ.

ಈ ಹೈ–ಸ್ಪೀಡ್ ರೈಲು ಮಾರ್ಗದಲ್ಲಿ ಒಟ್ಟು 12 ನಿಲ್ದಾಣಗಳು ಇರಲಿವೆ. ಮುಂಬೈ, ಥಾಣೆ, ವಿರಾರ್, ಬೋಯ್ಸರ್, ವಾಪಿ, ಬಿಲಿಮೋರಾ, ಸೂರತ್, ಭರೂಚ್, ವಡೋದರಾ, ಆನಂದ್, ಅಹಮದಾಬಾದ್ ಮತ್ತು ಸಬರಮತಿ ನಿಲ್ದಾಣಗಳು ಈ ಮಾರ್ಗದಲ್ಲಿ ಸೇರಿವೆ. ಯೋಜನೆಯ ಮೊದಲ ಹಂತದಲ್ಲಿ ಭಾರತದಲ್ಲೇ ನಿರ್ಮಾಣವಾಗುತ್ತಿರುವ ಬಿಇಎಂ–ಎಲ್ ಕಂಪನಿಯ ಃ28 ರೈಲುಸೆಟ್ಗಳನ್ನು ಬಳಸುವ ಯೋಜನೆ ಇದೆ. ಇದು ದೇಶೀಯ ರೈಲು ತಂತ್ರಜ್ಞಾನ ಕ್ಷೇತ್ರಕ್ಕೆ ಮಹತ್ವದ ಮೈಲುಗಲ್ಲಾಗಲಿದೆ.

ಜಪಾನ್ನ ಶಿಂಕನ್ಸೆನ್ ತಂತ್ರಜ್ಞಾನವು ವಿಶ್ವದ ಅತ್ಯಂತ ಸುರಕ್ಷಿತ, ವೇಗದ ಮತ್ತು ಸಮಯಪಾಲನೆಗೆ ಹೆಸರುವಾಸಿಯಾದ ರೈಲು ವ್ಯವಸ್ಥೆಗಳಲ್ಲಿ ಒಂದಾಗಿದೆ. ಇದೇ ತಂತ್ರಜ್ಞಾನವನ್ನು ಭಾರತದಲ್ಲಿ ಅಳವಡಿಸುವ ಮೂಲಕ ಹೈ–ಸ್ಪೀಡ್ ರೈಲು ಸೇವೆಯನ್ನು ಮತ್ತಷ್ಟು ವಿಶ್ವಾಸಾರ್ಹವಾಗಿಸಲು ಯೋಜಿಸಲಾಗಿದೆ.

ಮುಂಬೈ–ಅಹಮದಾಬಾದ್ ಬುಲೆಟ್ ರೈಲು ಯೋಜನೆ ಪೂರ್ಣಗೊಂಡರೆ, ದೇಶದಲ್ಲಿ ವೇಗದ ರೈಲು ಸಂಚಾರಕ್ಕೆ ಹೊಸ ದಿಕ್ಕು ಸಿಗಲಿದ್ದು, ಮುಂದಿನ ದಿನಗಳಲ್ಲಿ ಇತರ ಪ್ರಮುಖ ನಗರಗಳ ನಡುವೆಯೂ ಇಂತಹ ಹೈ–ಸ್ಪೀಡ್ ಕಾರಿಡಾರ್ಗಳ ಅಭಿವೃದ್ಧಿಗೆ ದಾರಿ ತೆರೆದುಕೊಳ್ಳಲಿದೆ. ಮಹಾರಾಷ್ಟ್ರ, ಕರ್ನಾಟಕ ಮತ್ತು ತೆಲಂಗಾಣ ರಾಜ್ಯಗಳನ್ನು ಸಂಪರ್ಕಿಸುವ ಈ ಮಹತ್ವಾಕಾಂಕ್ಷಿ ಬುಲೆಟ್ ರೈಲು ಯೋಜನೆ ದೇಶದ ಹೈ–ಸ್ಪೀಡ್ ರೈಲು ಜಾಲ ವಿಸ್ತರಣೆಯಲ್ಲಿ ಪ್ರಮುಖ ಮೈಲಿಗಲ್ಲಾಗಲಿದೆ.

ಈಗಾಗಲೇ ಮುಂಬೈ–ಅಹಮದಾಬಾದ್ ಹೈ–ಸ್ಪೀಡ್ ರೈಲು ಕಾರಿಡಾರ್ ಕಾಮಗಾರಿ ವೇಗವಾಗಿ ಸಾಗುತ್ತಿದ್ದು, 2027ರ ಆಗಸ್ಟ್ 15ರಂದು ಮೊದಲ ಹಂತದ ಸೇವೆ ಆರಂಭಿಸುವ ಗುರಿ ಹೊಂದಲಾಗಿದೆ. ಇದೇ ಮಾದ–ರಿಯಲ್ಲಿ ರೂಪುಗೊಳ್ಳುತ್ತಿರುವ ಮುಂಬೈ–ಹೈದರಾಬಾದ್ ಬುಲೆಟ್ ರೈಲು ಯೋಜನೆ ಜಾರಿಯಾದರೆ, ಮೂರು ರಾಜ್ಯಗಳ ನಡುವಿನ ಸಂಪರ್ಕ ಮತ್ತಷ್ಟು ಸುಗಮವಾಗಲಿದ್ದು, ಪ್ರಯಾಣದ ಸಮಯದಲ್ಲಿ ಭಾರೀ ಉಳಿತಾಯವಾಗುವ ನಿರೀಕ್ಷೆಯಿದೆ.

## ರಸಗೊಬ್ಬರ, ಬಿತ್ತನೆ ಬೀಜ, ನೀರಿನ ಅಭಾವ ನೀಗಿಸಲು ಡಿಸಿಗಳಿಗೆ ಸಿಎಂ ಸೂಚನೆ

❑ ನೈಜ್ಯ ದೆಸೆ ನ್ಯೂಸ್

**ಬೆಂಗಳೂರು: ಕೃಷಿ ಚಟುವಟಿಕೆಗೆ ರಸಗೊಬ್ಬರ ಹಾಗೂ ಬಿತ್ತನೆ ಬೀಜದ ಕೊರತೆ ಯಾಗಬಾರದು, ಜಲಾಶಯಗಳಲ್ಲಿ ನೀರಿನ ಸಂಗ್ರಹವನ್ನು ಸಮರ್ಪಕವಾಗಿ ಕಾಯ್ದುಕೊಳ್ಳುವ ಮೂಲಕ ಕುಡಿಯುವ ನೀರಿಗೆ ಕೊರತೆಯಾಗದಂತೆ ಎಚ್ಚರಿಕೆ ವಹಿಸಬೇಕು. ಶೈಕ್ಷಣಿಕ ಚಟುವಟಿಕೆಗಳ ವಿಚಾರದಲ್ಲಿ ನಿಗಾವಹಿಸಬೇಕೆಂದು ಮುಖ್ಯಮಂತ್ರಿ ಡಿ. ಕೆ.ಶಿವಕುಮಾರ್ ಸೂಚನೆ ನೀಡಿದ್ದಾರೆ.**

ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿಂದು ರಾಜ್ಯದ ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು, ಜಿಲ್ಲಾ ಪೊಲೀಸ್ ಮುಖ್ಯಾಧಿಕಾ–ರಿಗಳು ಸೇರಿದಂತೆ ಹಿರಿಯ ಅಧಿಕಾರಿಗಳ ಜೊತೆ ಸಭೆ ನಡೆಸಿದ ಅವರು, ಆಡಳಿತ ಯಂತ್ರವನ್ನು ಮತ್ತಷ್ಟು ಚುರುಕುಗೊಳಿಸುವ ನಿಟ್ಟಿನಲ್ಲಿ ಪ್ರಾಮಾಣಿಕ ಪ್ರಯತ್ನ ಮಾಡುವಂತೆ ನಿರ್ದೇಶನ ನೀಡಿದ್ದಾರೆ. ಇತ್ತೀಚೆಗೆ ಸರ್ಕಾರದ ವಿವಿಧ ಇಲಾಖೆಗಳ ಅಪರ ಮುಖ್ಯಕಾರ್ಯದರ್ಶಿಗಳು, ಕಾರ್ಯದರ್ಶಿಗಳ ಜೊತೆ ಸಭೆ ನಡೆಸಿದ ಮುಖ್ಯಮಂತ್ರಿಯವರು ಹಲವು ರೀತಿಯ ಸೂಚನೆಗಳನ್ನು ನೀಡಿದ್ದರು. ಮುಂದುವರೆದು ಇಂದು ಜಿಲ್ಲಾ ಕೇಂದ್ರಗಳ ಮುಖ್ಯಸ್ಥರಾಗಿರುವ ಜಿಲ್ಲಾಧಿಕಾ–ರಿಗಳು, ಜಿಲ್ಲಾ ಪೊಲೀಸ್ ಮುಖ್ಯಾಧಿಕಾ–ರಿಗಳ ಜೊತೆ ಮಹತ್ವದ ಚರ್ಚೆ ನಡೆಸಿದ್ದಾರೆ.

ಜನರ ಸಮಸ್ಯೆಗಳಿಗೆ ತ್ವರಿತವಾಗಿ ಸ್ಪಂದಿಸುವ ಮೂಲಕ ಆಡಳಿತ ಜನ ಪರವಾಗಿದೆ ಎಂಬುದನ್ನು ಖಚಿತಪಡಿಸಬೇಕು. ಸರ್ಕಾರದ ಯೋಜನೆಗಳನ್ನು ಅರ್ಹ ಫಲಾನುಭವಿಗಳಿಗೆ ತಲುಪಿಸುವ ಜೊತೆಗೆ ಸಮಸ್ಯೆಗಳಿಗೂ ತ್ವ–ರಿತವಾಗಿ ಸ್ಪಂದಿಸುವಂತೆ ಸೂಚಿಸಿದ್ದಾರೆ. ರಸ ಗೊಬ್ಬರದ ಪೂರೈಕೆಯಲ್ಲಿ ವ್ಯತ್ಯಯವಾಗಿದೆ.




ಕೆಲವು ಕಡೆ ರೈತರು ಪ್ರತಿಭಟನೆ ನಡೆಸುತ್ತಿದ್ದಾರೆ. ಪರಿಸ್ಥಿತಿಯನ್ನು ಜಿಲ್ಲಾಡಳಿತ ಸೂಕ್ಷ್ಮವಾಗಿ ನಿಭಾಯಿಸಬೇಕು. ಕಾನೂನು ಸುವ್ಯವಸ್ಥೆಗೆ ಧಕ್ಕೆಯಾಗದಂತೆ ಎಚ್ಚ–ರಿಕೆ ವಹಿಸಬೇಕೆಂದು ಸಲಹೆ ನೀಡಿದ್ದಾರೆ. ಪ್ರಸಕ್ತ ಸಾಲಿನಲ್ಲಿ ಮುಂಗಾರು ಕೊರತೆಯ ಮುನ್ಸೂಚನೆ ಇದೆ. ಹವಾಮಾನ ವರದಿಗೆ ಅನುಗುಣವಾಗಿ ಕೃಷಿ ಬೆಳೆಗಳನ್ನು ಬೆಳೆಯಲು ಕೃಷಿಕರಿಗೆ ಮಾರ್ಗದರ್ಶನ ನೀಡಬೇಕು ಎಂದು ಸಲಹೆ ನೀಡಿದ್ದಾರೆ.

ಕೈಗಾರಿಕೆಗಳಿಗೆ ಪೂರಕವಾದ ವಾತಾವರಣ ನಿರ್ಮಾಣವಾಗಬೇಕು. ಅನಗತ್ಯವಾಗಿ ನಿಯಮಗಳ ನೆಪ ಹೇಳಿ ತೊಂದರೆ ಕೊಡಬಾರದು, ಭೂ ಪರಿವರ್ತನೆ, ಮಂಜೂರಾತಿ ಸೇರಿದಂತೆ ಹಲವಾರು ವಿಚಾರಗಳಲ್ಲಿ ವಿಳಂಬ ಸರಿಯಲ್ಲ ಎಂದು ಎಚ್ಚರಿಕೆ ನೀಡಿದ್ದಾರೆ.

ಸರ್ಕಾರದ ಯೋಜನೆಗಳು ಅರ್ಹ ಫಲಾನುಭವಿಗಳಿಗೆ ತಲುಪಬೇಕು. ಅನರ್ಹರನ್ನು ಪತ್ತೆಹಚ್ಚಿ ಕಠಿಣ ಕ್ರಮ ಕೈಗೊಳ್ಳಬೇಕು ಎಂದು ಸೂಚನೆ ನೀಡಿದ ಮುಖ್ಯಮಂತ್ರಿಯವರು, ರಸ್ತೆ ಸುಧಾರಣೆ, ಮೂಲ ಸೌಲಭ್ಯಗಳ ಸೃಷ್ಟಿ, ಮಳೆ ಅನಾಹುತಗಳ ಮುನ್ನೆಚ್ಚರಿಕೆ ಸೇರಿದಂತೆ ಹಲವಾರು ವಿಚಾರಗಳಲ್ಲಿ ಕಾಳಜಿವಹಿಸುವಂತೆ ಆದೇಶಿಸಿದ್ದಾರೆ. ಉಪ ಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್, ಸಚಿವರಾದ ಪ್ರಿಯಾಂಕ್ ಖರ್ಗೆ, ಕೃಷ್ಣಭೈರೇಗೌಡ, ಯು.ಟಿ.ಖಾದರ್ ಸೇರಿದಂತೆ ಹಲವಾರು ಮಂದಿ ಸಭೆಯಲ್ಲಿ ಭಾಗವಹಿಸಿದರು.

## ನೇಮಕಾತಿ ಪ್ರಕಟಣೆ

**DHFWS ಬೆಂಗಳೂರು ನೇಮಕಾತಿ 2026 – 22 ವೈದ್ಯಕೀಯ ಅಧಿಕಾರಿ ಹುದ್ದೆಗಳಿಗೆ ವಾಕ್–ಇನ್ ಸಂದರ್ಶನ ಜೂನ್ 3, 2026**

DHFWS ಬೆಂಗಳೂರು ನೇಮಕಾತಿ 2026: 22 ವೈದ್ಯಕೀಯ ಅಧಿಕಾರಿ ಹುದ್ದೆಗಳಿಗೆ ಅರ್ಜಿ ಸಲ್ಲಿಸಿ. ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಂಘ ಬೆಂಗಳೂರು ಜೂನ್ 2026 ರ ಆಊಈಘಖ ಬೆಂಗಳೂರು ಅಧಿಕೃತ ಅಧಿಸೂಚನೆಯ ಮೂಲಕ ವೈದ್ಯಕೀಯ ಅಧಿಕಾರಿ ಹುದ್ದೆಗಳನ್ನು ಭರ್ತಿ ಮಾಡಲು ಅರ್ಹ ಮತ್ತು ಆಸಕ್ತ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಿದೆ. ಬೆಂಗಳೂರಿನಲ್ಲಿ – ಕರ್ನಾಟಕ ಸರ್ಕಾರದಲ್ಲಿ ವೃತ್ತಿಜೀವನವನ್ನು ಹುಡುಕುತ್ತಿರುವ ಉದ್ಯೋಗಾಕಾಂಕ್ಷಿಗಳು ಈ ಅವಕಾಶವನ್ನು ಬಳಸಿಕೊಳ್ಳಬಹುದು. ಆಸಕ್ತ ಅಭ್ಯರ್ಥಿಗಳು 09–ಜೂನ್–2026 ರಂದು ವಾಕ್–ಇನ್–ಸಂದರ್ಶನಕ್ಕೆ ಹಾಜರಾಗಬಹುದು.
ಅಧಿಸೂಚನೆ ಬಿಡುಗಡೆ ದಿನಾಂಕ: 30–05–2026
ವಾಕ್–ಇನ್ ದಿನಾಂಕ: 09–ಜೂನ್–2026
ಅಧಿಕೃತ ವೆಬ್‌ಸೈಟ್: bengaluruurban.nic.in

## ಎಸ್ಡಿಎಂಸಿ ಪದಾಧಿಕಾರಿಗಳಿಗೆ ಸನ್ಮಾನ

ನೈಜ್ಯ ದೆಸೆ ನ್ಯೂಸ್

**ಅರಕೇರಾ: ಶಾಲೆಯ ಸರ್ವತೋಮುಖ ಅಭಿವೃದ್ಧಿ ಯಲ್ಲಿ ಶಿಕ್ಷಕರ ಜತೆಗೆ ಶಾಲಾ ಅಭಿವೃದ್ಧಿ ಮೇಲುಸ್ತುವಾರಿ ಸಮಿತಿಯ ಪಾತ್ರ ಬಹುಮುಖ್ಯವಾದದ್ದು ಎಂದು ಕಾಂಗ್ರೆಸ್ ಪಕ್ಷದ ಪರಿಶಿಷ್ಟ ಪಂಗಡ ವಿಭಾಗದ ಬ್ಲಾಕ್ ಅಧ್ಯಕ್ಷ ಬಸವರಾಜ ಪೂಜಾರಿ ಹೇಳಿದರು.**



ಅವರು ಪಟ್ಟಣದ ಕರ್ನಾಟಕ ಪಬ್ಲಿಕ್ ಶಾಲೆ ಆದರ್ಶ ವಿದ್ಯಾಲಯದಲ್ಲಿ ಅವಿರೋಧವಾಗಿ ಆಯ್ಕೆಯಾದ ನೂತನ ಎಸ್ಡಿಎಂಸಿ ಅಧ್ಯಕ್ಷ ತಿಮ್ಮಪ್ಪ ನಾಯಕ ಜಲ್ಲೇ, ಉಪಾಧ್ಯಕ್ಷ ಅಮರೇಶ ಹಿರೇಬೂದುರು ಹಾಗೂ ಪದಾಧಿಕಾರಿಗಳಿಗೆ ಸನ್ಮಾನಿಸಿ ಮಾತನಾಡಿದರು. ಇದೇ ವೇಳೆ ಮಹಾಂತೇಶ ಪೂಜಾರಿ, ಹನ್ಮಂತ್ರಾಯ ಗೌರ್ನಮೆಂಟ್, ರಂಗಪ್ಪ ತುಮನಮರಡಿ, ರಾಜು ನಾಯಕ, ಸಿದ್ದಯ್ಯ ಸ್ವಾಮಿ, ಹನ್ಮಂತ್ರಾಯ ಕುಲಕರ್ಣಿ,ಸಿದ್ದಪ್ಪ ಕಬ್ಬೇರ್, ನಾಗೇಶ ಜಲ್ಲೇ, ಮಹಿಬೂಬ ಬಡಿಗೇರ, ರಂಗಪ್ಪ ಜಾಲಹಳ್ಳಿ ಇದ್ದರು.

## ಇರಾನ್ ಯುದ್ಧದ ಎಫೆಕ್ಟ್: ಅಕ್ಕಿ ದರ ಏರಿಕೆ

ನೈಜ್ಯ ದೆಸೆ ನ್ಯೂಸ್

**ಬೆಂಗಳೂರು: ಅಗತ್ಯ ವಸ್ತುಗಳ ಬೆಲೆ ಏರಿಕೆ ಮತ್ತೆ ಮುಂದುವರೆದಿದೆ. ಹಲವಾರು ವಸ್ತುಗಳ ಬೆಲೆ ಏರಿಕೆ ನಡುವೆಯೇ ಇದೀಗ ಅಕ್ಕಿ ದರದಲ್ಲೂ ಗಣನೀಯ ಹೆಚ್ಚಳ ಕಂಡುಬಂದಿದ್ದು, ಗ್ರಾಹಕರಿಗೆ ಮತ್ತೊಂದು ಆರ್ಥಿಕ ಹೊರೆ ಎದುರಾಗಿದೆ.**

| ಅಕ್ಕಿಯ ತಳಿ | ಹಿಂದಿನ ದರ (ರೂ./ಕೆಜಿ) | ಸದ್ಯದ ದರ (ರೂ./ಕೆಜಿ) |
|---|---|---|
| ಸೋನಾಮಸುರಿ | 54 | 64 |
| ಕಾವೇರಿ ಸ್ಟೀಮ್ | 42 | 55 |
| ಸ್ಟೀಮ್ | 48 | 60 |
| ಸ್ಟೀಮ್ | 53 | 65 |
| ಕೊಲ್ಲಂ ಸ್ಟೀಮ್ | 58 | 68 |



ರಾಜ್ಯದ ಹಲವು ಭಾಗಗಳಲ್ಲಿ ವಿವಿಧ ತಳಿಯ ಅಕ್ಕಿಗಳ ಬೆಲೆ ಕೆಜಿಗೆ 5 ರಿಂದ 10ರವರೆಗೆ ಏರಿಕೆಯಾಗಿದೆ.ಮಾರುಕಟ್ಟೆಯಲ್ಲಿ ಅಕ್ಕಿಯ ಲಭ್ಯತೆ ಕಡಿಮೆಯಾಗಿರುವುದು ಹಾಗೂ ಬೇಡಿಕೆ ಹೆಚ್ಚಿರುವುದು ದರ ಏರಿಕೆಗೆ ಪ್ರಮುಖ ಕಾರಣ ಎನ್ನಲಾಗುತ್ತಿದೆ. ವ್ಯಾಪಾರಿಗಳ ಪ್ರಕಾರ ಪ್ರಸ್ತುತ ಇರುವ ಸಂಗ್ರಹವು ನವೆಂಬರ್‌ವರೆಗೆ ಮಾತ್ರ ಸಾಕಾಗುವ ಸಾಧ್ಯತೆ ಇದ್ದು, ಹೊಸ ಬೆಳೆ ಮಾರುಕಟ್ಟೆಗೆ ಬರುವವರೆಗೂ ಬೆಲೆ ಇಳಿಕೆಯಾಗುವ ಲಕ್ಷಣಗಳು ಕಾಣುತ್ತಿಲ್ಲ. ದರ ಏರಿಕೆಯಿಂದ ಗೃಹ ಬಳಕೆದಾರರಷ್ಟೇ ಅಲ್ಲದೆ ಹೋಟೆಲ್, ಕ್ಯಾಂಟೀನ್ ಹಾಗೂ ಆಹಾರ ಉದ್ಯಮಗಳ ಮೇಲೂ ಪರಿಣಾಮ ಬೀರಿದೆ. ಅಕ್ಕಿ ಖರೀದಿಗೆ ಗ್ರಾಹಕರು ಮುಗಿಬೀಳುತ್ತಿರುವುದ–ರಿಂದ ಕೆಲವು ಪ್ರದೇಶಗಳಲ್ಲಿ ಬೇಡಿಕೆ ಮತ್ತಷ್ಟು ಹೆಚ್ಚಾಗಿದೆ. ಪ್ರಮುಖ ಅಕ್ಕಿ ತಳಿಗಳ ಪರಿಷ್ಕೃತ ದರಗಳು ಮೇಲಿನ ಅಕ್ಕಿ ತಳಿಗಳ ದರಗಳಲ್ಲಿ ಪ್ರತಿ ಕೆ–ಜಿಗೆ ?10 ರಿಂದ ?13ರವರೆಗೆ ಏರಿಕೆಯಾಗಿದ್ದು,

# ಸಂಪುಟದಲ್ಲಿ ಎಸ್ಟಿ ಪಂಗಡಕ್ಕೆ ಹೆಚ್ಚಿನ ಆದ್ಯತೆ ಅಗತ್ಯ

ನೈಜ್ಯ ದೆಸೆ ನ್ಯೂಸ್

**ಬೆಂಗಳೂರು: ಎಸ್‌ಟಿ (ಪರಿಶಿಷ್ಟ ಪಂಗಡ) ಸಮುದಾಯಕ್ಕೆ ಸಚಿವ ಸಂಪುಟದಲ್ಲಿ ಮತ್ತಷ್ಟು ಪ್ರಾತಿನಿಧ್ಯ ನೀಡಬೇಕು ಹಾಗೂ ಮೀಸಲಾತಿ ಸೇರಿದಂತೆ ಸಮುದಾಯದ ಪ್ರಮುಖ ಬೇಡಿಕೆಗಳನ್ನು ಈಡೇರಿಸಬೇಕು ಎಂದು ಒತ್ತಾಯಿಸಿ ಶೀಘ್ರದಲ್ಲೇ ಮುಖ್ಯಮಂತ್ರಿಗಳನ್ನು ಭೇಟಿ ಮಾಡುವುದಾಗಿ ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ತಿಳಿಸಿದ್ದಾರೆ.**



ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ನಮ್ಮ ಸಮುದಾಯಕ್ಕೆ ಮತ್ತೂ ಎರಡು ಸಚಿವ ಸ್ಥಾನಗಳನ್ನು ನೀಡಬೇಕು ಎನ್ನುವುದು ನಮ್ಮ ಬೇಡಿಕೆಯಾಗಿದೆ. ಹಿಂದೆ ಎಸ್‌ಟಿ ಸಮುದಾಯದ ಮೂವರು ಸಚಿವ–ರಿದ್ದರು. ಅದೇ ರೀತಿ ಈಗಲೂ ಮೂರು ಸಚಿವ ಸ್ಥಾನಗಳನ್ನು ನೀಡಬೇಕು. ಇದೇನೂ ನಮ್ಮ ಹೆಚ್ಚುವರಿ ಬೇಡಿಕೆಯಲ್ಲ, ಹಳೆಯ ಪ್ರಾತಿನಿಧ್ಯದ ಮುಂದುವರಿಕೆಯಷ್ಟೇ. ಇದರೊಂದಿಗೆ ವಿಶ್ವವಿದ್ಯಾಲಯಗಳಲ್ಲಿ ಎಸ್‌ಟಿ ಸಮುದಾಯದ ಉಪಕುಲಪತಿಗಳ (ವಿಸಿ) ನೇಮಕವಾಗಿಲ್ಲ. ತಕ್ಷಣವೇ ನಮ್ಮ ಸಮುದಾಯದ ವಿಸಿಗಳನ್ನು ನೇಮಕ ಮಾಡಬೇಕು," ಎಂದು ಜಾರಕಿಹೊಳಿ ಒತ್ತಾಯಿಸಿದರು.

"ಎರಡು ಮೂರು ಸಮುದಾಯಗಳ ಮೀಸಲಾತಿ ವಿಷಯ ಸದ್ಯ ಚರ್ಚೆಯಲ್ಲಿದೆ. ಮೀಸಲಾತಿ ವಿಚಾರದಲ್ಲಿ ನ್ಯಾಯಾಲಯ ನೀಡಿರುವ ತಡೆಯಾಜ್ಞೆಯನ್ನು ತೆರವುಗೊಳಿಸಬೇಕಿದೆ. ಇದಕ್ಕಾಗಿ ಸರ್ಕಾರ ಹಿರಿಯ ವಕೀಲರನ್ನು ನೇಮಕ ಮಾಡಬೇಕು. ಕೋರ್ಟ್ ಮುಖಾಂತರವೇ ಮೀಸಲಾತಿ ಸಮಸ್ಯೆಯನ್ನು ಸಂಪೂರ್ಣವಾಗಿ ಬಗೆಹ–ರಿಸಿಕೊಳ್ಳಬೇಕಿದೆ. ಈ ಎಲ್ಲ ವಿಷಯಗಳ ಕುರಿತು ಚರ್ಚಿಸಲು ಎಸ್‌ಟಿ ಸಮುದಾಯದ ಶಾಸಕರ ನಿಯೋಗದೊಂದಿಗೆ ಶೀಘ್ರದಲ್ಲೇ ಸಿಎಂ ಅವರನ್ನು ಭೇಟಿ ಮಾಡಲಿದ್ದೇವೆ."ಎಂದು ಸಚಿವ ಸತೀಶ್ ಜಾರಕಿಹೊಳಿ ಹೇಳಿದರು.

ಕಾಂಗ್ರೆಸ್ ಶಾಸಕಾಂಗ ಪಕ್ಷದ ಸಭೆಯ ಕುರಿತು ಕೇಳಲಾದ ಪ್ರಶ್ನೆಗೆ ಉತ್ತರಿಸಿದ ಅವರು, "ಈ ಸಭೆಯನ್ನು ಕೇವಲ ಶಾಸಕರಿಗೆ ತರಬೇತಿ ನೀಡಲು ಕರೆಯಲಾಗಿದೆ. ಮತದಾನ ಮಾಡುವಾಗ ಶಾಸಕರಿಂದ ಯಾವುದೇ ತಪ್ಪುಗಳಾಗಬಾರದು. ಅದಕ್ಕಾಗಿ ಸರಿಯಾಗಿ ಪ್ರ್ಯಾಕ್ಟೀಸ್ ಮಾಡಬೇಕಾಗುತ್ತದೆ. ಎರಡು–ಮೂರು ಮತಗಳು ತಪ್ಪಾದರೂ ಅಭ್ಯರ್ಥಿ ಔಟ್ ಆಗುವ ಸಾಧ್ಯತೆ ಇರುತ್ತದೆ. ಹೀಗಾಗಿ ಸುರಕ್ಷತೆ ಮತ್ತು ಸ್ಟ್ರಾಟಜಿ (ತಂತ್ರಗಾರಿಕೆ) ರೂಪಿಸಲು ಶಾಸಕರನ್ನು ಕರೆದುಕೊಂಡು ಹೋಗಲಾಗುತ್ತಿದೆ. ನಮ್ಮಲ್ಲಿ ಗರಿಷ್ಠ ಮತಗಳಿರುವುದರಿಂದ ನಾವು ನೂರಕ್ಕೆ ನೂರರಷ್ಟು ಗೆಲ್ಲುತ್ತೇವೆ, ಯಾವುದೇ ಸಮಸ್ಯೆ ಇಲ್ಲ," ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಜಿಲ್ಲಾಧಿಕಾರಿಗಳ ಸಭೆಯ ಕುರಿತು ಮಾತನಾಡಿದ ಅವರು, "ರಾಜ್ಯದ ಬೇರೆ ಬೇರೆ ಜಿಲ್ಲೆಗಳಲ್ಲಿ ಮಳೆ ಕೊರತೆಯಿದೆ. ಪ್ರಾದೇಶಿಕವಾಗಿ ವಿಭಿನ್ನ ಬೇಡಿಕೆಗಳಿದ್ದು, ನಾನು ಕೂಡ ಡಿಸಿಗಳ ಮೀಟಿಂಗ್‌ನಲ್ಲಿ ಭಾಗವಹಿಸಲಿದ್ದೇನೆ," ಎಂದರು.

ಇದೇ ವೇಳೆ ನೀತಿ ಆಯೋಗದ ಸಭೆಯ ಬಗ್ಗೆ ಪ್ರತಿಕ್ರಿಯಿಸಿ, "ಹಿಂದೆಲ್ಲ ಸಚಿವ ಕೃಷ್ಣ ಬೈರೇಗೌಡ ಅವರು ನೀತಿ ಆಯೋಗದ ಸಭೆಯಲ್ಲಿ ಭಾಗವಹಿಸುತ್ತಿದ್ದರು. ಆದರೆ ಈ ಬಾರಿ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರೇ ನೇರವಾಗಿ ಭಾಗವಹಿಸಿದ್ದಾರೆ. ಇದರಿಂದಾಗಿ ರಾಜ್ಯದ ಹೆಚ್ಚಿನ ವಿಷಯಗಳನ್ನು ಮತ್ತು ಪ್ರಮುಖ ಬೇಡಿಕೆಗಳನ್ನು ಕೇಂದ್ರದ ಮುಂದೆ ಸಮರ್ಥವಾಗಿ ಚರ್ಚಿಸಲು ಅನುಕೂಲವಾಗುತ್ತದೆ," ಎಂದು ಸತೀಶ್ ಜಾರಕಿಹೊಳಿ ತಿಳಿಸಿದರು.

# ಬಾಣ–ಬಿರುಸುಗಳ ನಡುವೆ ಪೇಜಾವರ ಶ್ರೀಗಳ ಭವ್ಯ ಪುರಪ್ರವೇಶ: ಭಕ್ತಿಸಾಗರದಲ್ಲಿ ತೇಲಿದ ಪಟ್ಟಣ

ನೈಜ್ಯ ದೆಸೆ ನ್ಯೂಸ್

**ಅಧಿಕ ಜೇಷ್ಠಮಾಸದ ಅಂಗವಾಗಿ ಬಳಗಾನೂರಿನ ಶ್ರೀ ಬಂಧುಶತಪುರೇಶ ದೇವರಿಗೆ ಲಕ್ಷ ತುಳಸಿ ಅರ್ಚನೆ, ಪವಮಾನ ಹೋಮ ಹಾಗೂ ವಿವಿಧ ಧಾರ್ಮಿಕ ಕಾರ್ಯಕ್ರಮಗಳನ್ನು ಜೂನ್ 4ರಿಂದ 14ರವರೆಗೆ ಆಯೋಜಿಸಲಾಗಿದ್ದು, ಶನಿವಾರ ಸಂಜೆ ಪೇಜಾವರ ಮಠ, ಉಡುಪಿಯ ಪರಮಪೂಜ್ಯ ಶ್ರೀ ಶ್ರೀ ಶ್ರೀ 1008 ವಿಶ್ವಪ್ರಸನ್ನ ತೀರ್ಥ ಶ್ರೀಪಾದಂಗಳವರ ಭವ್ಯ ಪುರಪ್ರವೇಶ ಕಾರ್ಯಕ್ರಮ ಅದ್ದೂರಿಯಾಗಿ ನೆರವೇ–ರಿತು.ಶ್ರೀಗಳ ಆಗಮನದ ಹಿನ್ನೆಲೆಯಲ್ಲಿ ವಿಪ್ರಸಮಾಜದ ಹಿರಿಯರು, ಮುಖಂಡರು ಹಾಗೂ ಪಟ್ಟಣದ**



**ಸಾರ್ವಜನಿಕರು ಅಪಾರ ಸಂಖ್ಯೆಯಲ್ಲಿ ಭಾಗವಹಿಸಿ ಬಾಣ–ಬಿರುಸುಗಳನ್ನು ಸಿಡಿಸುವ ಮೂಲಕ ಭಕ್ತಿಪೂರ್ವಕ ಸ್ವಾಗತ ಕೋರಿದರು. ಪಟ್ಟಣದ ಪ್ರಮುಖ ಬೀದಿಗಳಲ್ಲಿ ಭಕ್ತರು ಜಯಘೋಷ ಮೊಳಗಿಸುತ್ತಾ ಶ್ರೀಗಳನ್ನು ಗೌರವದಿಂದ ಬರಮಾಡಿಕೊಂಡರು.**

ಪುರಪ್ರವೇಶ ಕಾರ್ಯಕ್ರಮವು ಧಾರ್ಮಿಕ ಸಂಭ್ರಮ, ಭಕ್ತಿ ಮತ್ತು ವೈಭವದ ವಾತಾವರಣದಲ್ಲಿ ಜರುಗಿತು. ಶ್ರೀಗಳ ದರ್ಶನಕ್ಕಾಗಿ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಸೇರಿದ್ದು, ಕಾರ್ಯಕ್ರಮಕ್ಕೆ ವಿಶೇಷ ಮೆರುಗು ತಂದಿತು.ರವಿವಾರ ಶ್ರೀಗಳಿಗೆ ಪಾದಪೂಜೆ ಮಾಡಲಾಗುವುದು. ಮಾರುತಿ ದೇವರಿಗೆ ಅಭಿಷೇಕ ಹಾಗೂ ಪವಮಾನ ಹೋಮ ಕಾರ್ಯಕ್ರಮಗಳಲ್ಲಿ ಪೇಜಾವರ ಶ್ರೀಗಳು ನೇತೃತ್ವ ವಹಿಸಲಿದ್ದು, ಸಾವಿರಾರು ಭಕ್ತರು ಭಾಗವಹಿಸುವ ನಿರೀಕ್ಷೆಯಿದೆ.

# ಹವ್ಯಾಸವು ಬಹು ಬೇಗ ಚಟವಾಗುವ ಕ್ಯಾನ್ಸರ್‌ಕಾರಕ ತಂಬಾಕು ಉತ್ಪನ್ನಗಳ ಸೇವನೆಯಿಂದ ದೂರವಿರಿ:



ನೈಜ್ಯ ದೆಸೆ ನ್ಯೂಸ್

**ರಾಯಚೂರು: ಆರಂಭದಲ್ಲಿ ಹವ್ಯಾಸವಾಗಿ ನಂತರ ಚಟವಾಗಿ ಬದಲಾಗುವ, ತಂಬಾಕು ಉತ್ಪನ್ನವಾದ ಗುಟ್ಕಾ, ಪಾನ್ ಮಸಾಲ ಹಾಗೂ ಸಿಗರೇಟ್, ಬೀಡಿ, ಹುಕ್ಕಾ, ಸೇದುವವರು ತಮಗಿಂತ ಸುತ್ತಲಿನ ಸಹಪಾಟಿಗಳು, ಮಿತ್ರರು, ಕುಟುಂಬದ ಸದಸ್ಯರ ಆರೋಗ್ಯದ ಮೇಲಾಗುವ ಹಾನಿ ತಡೆಗಟ್ಟಲು ತಂಬಾಕು ಉತ್ಪನ್ನಗಳ ಸೇವನೆಯನ್ನು ಸ್ವಯಂ ಪ್ರೇರಣೆಯಿಂದ ನಿಯಂತ್ರಿಸಿಕೊಳ್ಳಬೇಕು. ಅದರಲ್ಲೂ ಸಾರಿಗೆ ಸಂಸ್ಥೆಯಲ್ಲಿ ಕರ್ತವ್ಯ ನಿರ್ವಹಿಸುವ ಚಾಲಕ, ನಿರ್ವಾಹಕ, ಮೆಕ್ಯಾನಿಕ್ ಸೇರಿದಂತೆ ಇತರ ಸಿಬ್ಬಂದಿ ಜಾಗೃತರಾಗಬೇಕು ಎಂದು ಕೆಕೆಆರಟಿಸಿ ರಾಯಚೂರುನ ವಿಭಾಗೀಯ ನಿಯಂತ್ರಣಾಧಿಕಾರಿ ಇಮಾಮ್ ಕಾಸೀಮ್ ಕಂದಗಲ್ ತಿಳಿಸಿದರು.**

ಆರೋಗ್ಯ ಇಲಾಖೆ, ಕಲ್ಯಾಣ ವಿಶ್ವ ತಂಬಾಕು ರಹಿತ ದಿನದ ಅಂಗವಾಗಿ ಕೆಕೆಆರ್‌ಟಿಸಿ ಡಿಪೋ 1 ಹಾಗೂ 2 ರಲ್ಲಿ ಸಂಸ್ಥೆಯ ಸಿಬ್ಬಂದಿಯವರ ಪ್ರತಿ ವರ್ಷ ಮೇ 31 ರಂದು ತಂಬಾಕು ಉತ್ಪನ್ನಗಳ ಸೇವನೆಯಿಂದ ಆರೋಗ್ಯದ ಮೇಲೆ ಉಂಟಾಗುವ ದುಷ್ಪರಿಣಾಮಗಳ ಜಾಗೃತಿ ನೀಡುವ ಹಿನ್ನಲೆ ಪತ್ರಿಕೆಗಳೊಂದಿಗೆ ಮಾತನಾಡುತ್ತಾ ಜಿಲ್ಲೆಯಾದ್ಯಂತ ಎಲ್ಲ ತಾಲೂಕುಗಳಲ್ಲಿ ಜನಜಾಗೃತಿ ಶಿಬಿರ, ಗುಂಪುಸಭೆ, ಶಾಲಾ, ಕಾಲೇಜುಗಳಲ್ಲಿ ಅರಿವು ಕಾರ್ಯಕ್ರಮವನ್ನು ಜಿಲ್ಲಾ ಸರ್ವೆಕ್ಷಣಾಧಿಕಾರಿ ಡಾ ಗಣೇಶ್ ಕೆ ನೇತೃತ್ವದಲ್ಲಿ ಹಮ್ಮಿಕೊಳ್ಳಲಾಗುತ್ತಿದೆ. ತಂಬಾಕು 4000 ರಾಸಾಯನಿಕಗಳನ್ನು ಹೊಂದಿದ್ದು, ಅದರಲ್ಲಿ 70 ರಾಸಾಯನಿಕಗಳು ಕ್ಯಾನ್ಸರ್‌ಗೆ ಕಸರಣವಾಗಿವೆ. ವಿಶೇಷವಾಗಿ ಬಾಯಿ ಕ್ಯಾನ್ಸರ್, ಶ್ವಾಸಕೋಶ ಕ್ಯಾನ್ಸರ್‌ನೊಂದಿಗೆ ಇತರೆ ಅಂಗಾಂಗಗಳು ಹಾನಿಗೀಡಾಗುತ್ತವೆ.

ಪ್ರಸಕ್ತ ವರ್ಷ ವಿಶ್ವ ಆರೋಗ್ಯ ಸಂಸ್ಥೆಯು 'ಆಕರ್ಷಣೆಯ ಮುಖವಾಡವನ್ನು ಬಹಿರಂಗಪಡಿಸುವುದು' ಎಂಬ ಘೋಷವಾಕ್ಯದೊಂದಿಗೆ ಮಾರಕಟ್ಟೆಯಲ್ಲಿ ಜನತೆಯನ್ನು ಅದರಲ್ಲೂ ಯುವಜನತೆಯನ್ನು ಆಕರ್ಷಿಸಲು ತರವೆವಾರಿ ಪ್ಯಾಕಿಂಗ್, ಆಕರ್ಷಕ ಹೆಸರು, ಹೊರನೋಟ ಹೊಂದಿರುವ ಉತ್ಪನ್ನಗಳಲ್ಲಿ ಅಡಗಿರುವ ನಿಕೋಟಿನ್ ಮತ್ತು ತಂಬಾಕು ದುಷ್ಪರಿಣಾಮವನ್ನು ಅದರಿಂದಾಗುವ ವ್ಯಸನವನ್ನು, ಕುಟುಂಬದ ಆರ್ಥಿಕ ದುಸ್ಥಿತಿಯನ್ನು, ಆಸ್ಪತ್ರೆಗಳಿಗೆ ದಾಖಲಾಗಿ ಯಾತನೆ ಅನುಭವಿಸುವ ಸಂಕಟವನ್ನು, ಎದುರಿಗೆ ತಂಬಾಕು ಸೇವನೆಯಿಂದ ಉಂಟಾಗುವ ಮಾರಕ ಕಾಯಿಲೆಗಳು ಮತ್ತು ಅವುಗಳ ದುಷ್ಪರಿಣಾಮಗಳ ಬಗ್ಗೆ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲು ವಿಶ್ವ ಆರೋಗ್ಯ ಸಂಸ್ಥೆಯು ಈ ದಿನವನ್ನು ಆಯೋಜಿಸುತ್ತದೆ. 1987 ರಲ್ಲಿ ವಿಶ್ವ ಆರೋಗ್ಯ ಸಂಘಟನೆಯು ಈ ದಿನಾಚರಣೆಯನ್ನು ಜಾರಿಗೆ ತಂದಿತು. ತಂಬಾಕು ಉತ್ಪನ್ನಗಳ ಸೇವನೆಯಿಂದ ಆಗುವ ಆರೋಗ್ಯದ ಹಾನಿ, ಸಾವು–ನೋವುಗಳು ಹಾಗೂ ತಂಬಾಕು ಕಂಪನಿಗಳ ವ್ಯಾಪಾರ ನೀತಿಗಳ ಬಗ್ಗೆ ಜನರಿಗೆ ಎಚ್ಚರಿಕೆ ನೀಡಿ ಸಾರ್ವಜನಿಕ–ರಿಗೆ ಇದರ ಕುರಿತು ಅರಿವು ಮೂಡಿಸುವುದಾಗಿದೆ.

ತಂಬಾಕು ಒಂದು ಸಸ್ಯದಿಂದ ದೊರೆಯುವ ಪದಾರ್ಥವಾಗಿದ್ದು, ಇದರ ಎಲೆಗಳನ್ನು ಒಣಗಿಸಿ ವಿವಿಧ ರೂಪಗಳಲ್ಲಿ ಬಳಸಲಾಗುತ್ತದೆ. ಮುಖ್ಯವಾಗಿ ಇದರಲ್ಲಿ ನಿಕೋಟಿನ್ ಎಂಬ ವ್ಯಸನಕಾರಿ ರಾಸಾಯನಿಕವಿದೆ. ತಂಬಾಕಿನ ಬಳಕೆಗಳ ರೂಪಗಳು : ಸಿಗರೇಟ್, ಬೀಡಿ, ಸಿಗಾರ್, ಗುಟ್ಕಾ, ಖೈನಿ, ಜರ್ದಾ, ಹುಕ್ಕಾ. ತಂಬಾಕಿನ ಹಾನಿಕಾರಕ ಪರಿಣಾಮಗಳು : ಶ್ವಾಸಕೋಶದ ಕ್ಯಾನ್ಸರ್ ಸೇರಿದಂತೆ ವಿವಿಧ ಕ್ಯಾನ್ಸರ್‌ಗಳ ಅಪಾಯ ಹೆಚ್ಚಾಗುತ್ತದೆ. ಹೃದಯ ಸಂಬಂಧಿತ ಕಾಯಿಲೆ ಮತ್ತು ಹೃದಯಾಘಾತದ ಸಾಧ್ಯತೆ ಹೆಚ್ಚುತ್ತದೆ. ದೀರ್ಘ ಕಾಲದ ಶ್ವಾಸಕೋಶದ ಕಾಯಿಲೆಗಳು ಉಂಟಾಗಬಹುದು. ಬಾಯಿ, ಗಂಟಲು ಮತ್ತು ನಾಲಿಗೆಯ ಆರೋಗ್ಯ ಹದಗೆಡುತ್ತದೆ. ನಿಕೋಟಿನ್ನಿಂದ ವ್ಯಸನ ಉಂಟಾಗುತ್ತದೆ. ತಂಬಾಕು ಬಿಡುವುದರಿಂದ ಆಗುವ ಲಾಭಗಳು: ಉಸಿರಾಟ ಸುಧಾರಿಸುತ್ತದೆ. ಹೃದಯದ ಆರೋಗ್ಯ ಉತ್ತಮವಾಗುತ್ತದೆ. ಕ್ಯಾನ್ಸರ್ ಮತ್ತು ಇತರ ಗಂಭೀರ ಕಾಯಿಲೆಗಳ ಅಪಾಯ ಕಡಿಮೆಯಾಗುತ್ತದೆ. ಹಣದ ಉಳಿತಾಯವಾಗುತ್ತದೆ. ಜೀವನದ ಗುಣಮಟ್ಟ ಹೆಚ್ಚುತ್ತದೆ. ವಾಣಿಜ್ಯ ಬೆಳೆಯಾಗಿರುವ ತಂಬಾಕು ಉತ್ಪನ್ನವು 4000ಕ್ಕಿಂತ ಹೆಚ್ಚು ರಾಸಾಯನಿಕಗಳನ್ನು ಹೊಂದಿದ್ದು ಅನಿಯಮಿತ ಸೇವನೆಯಿಂದ ವ್ಯಕ್ತಿಯ ದೇಹದ ಎಲ್ಲಾ ಅಂಗಗಳು ಹಾನಿಯಾಗುವುದರಿಂದ ಸಾರ್ವಜನಿಕ ಸ್ಥಳಗಳಲ್ಲಿ ಸಿಗರೇಟ್ ಸೇದುವವ–ರಿಗೆ ಕಾಯ್ದೆ ಅಡಿಯಲ್ಲಿ ದಂಡ ವಿಧಿಸುವ ಜೊತೆಗೆ ಮಾರಾಟಗಾರರು ಪರವಾನಿಗೆ ಪಡೆದಿರಬೇಕು.

ಜಿಲ್ಲೆಯಲ್ಲಿ ಎಲ್ಲಾ ಶಾಲಾ ಕಾಲೇಜುಗಳಲ್ಲಿ ತಂಬಾಕು ಸೇವೆನೆ ದುಷ್ಪರಿಣಾಮ ಕುರಿತು ಜಾಗೃತಿಯನ್ನು ನೀಡಲಾಗುತ್ತಿದ್ದು ಪ್ರಮುಖ ಹೋಟೆಲ್‌ಗಳು, ಬಾರ್ ಮತ್ತು ರೆಸ್ಟೋರೆಂಟ್‌ಗಳಲ್ಲಿ ಸ್ಮೋಕಿಂಗ್ ಝೂನ್ ಗಳನ್ನು ಕಡ್ಡಾಯವಾಗಿ ಸ್ಥಾಪಿಸಲು ಸ್ಥಳೀಯ ಆಡಳಿತಗಳ ಸಹಕಾರ ಅತ್ಯಗತ್ಯವಾಗಿದೆ. ಅಲ್ಲದೇ ಜಿಲ್ಲಾ ಆಸ್ಪತ್ರೆ ರೂಮ್ ನಂ–43 ರಲ್ಲಿ ತಂಬಾಕು ವ್ಯಸನಿಗಳಿಗಾಗಿ ತಂಬಾಕು ವ್ಯಸನ ಮುಕ್ತ ಕೇಂದ್ರವು ಉಚಿತ ಆಪ್ತಸಮಾಲೋಚನೆ ಹಾಗೂ ಅಗತ್ಯ ಚಿಕಿತ್ಸೆ ಸೇವೆಯನ್ನು ನೀಡಲಾಗುತ್ತಿದ್ದು, ಇದರ ಸದುಪಯೋಗವನ್ನು ಸಾರ್ವಜನಿಕರು ಬಳಸಿಕೊಂಡು ತಂಬಾಕು ರಹಿತ ಸಮಾಜ ನಿರ್ಮಿಸಲು ಎಲ್ಲರೂ ಕೈ ಜೋಡಿಸಬೇಕೆಂದು ಕರೆ ನೀಡಿದರು.

# ಡೆಂಗ್ಯೂ, ಪಲ್ಸ್ ಪೋಲಿಯೋ ನಿರ್ಮೂಲನೆಗೆ ಸಜ್ಜು: ಟಾಸ್ಕ್ ಫೋರ್ಸ್ ಸಮಿತಿ ಸಭೆಯಲ್ಲಿ ನಿರ್ಣಯ*

ನೈಜ್ಯ ದೆಸೆ ನ್ಯೂಸ್

**ಸಿಂಧನೂರು: ಜಿಲ್ಲಾ ಪಂಚಾಯತ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ರಾಯಚೂರು ಮತ್ತು ರಾಷ್ಟ್ರೀಯ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣ ಇಲಾಖೆ ರಾಯಚೂರು ಹಾಗೂ ತಾಲೂಕಾರೋಗ್ಯಾಧಿಕಾರಿಗಳ ಕಾರ್ಯಾಲಯದ ಸೊಳ್ಳೆಗಳಿಂದ ಹರಡುವ ರೋಗ ನಿಯಂತ್ರಣ ಕಾರ್ಯಕ್ರಮದ ಅಡಿಯಲ್ಲಿ ಸ್ಥಳೀಯ ತಾಲ್ಲೂಕು ಆಡಳಿತ ಸೌಧದಲ್ಲಿ ಮಾನ್ಯ ತಹಶೀಲ್ದಾರ್ ಅರುಣ್ ದೇಸಾಯಿ ಅವರ ಅಧ್ಯಕ್ಷತೆಯಲ್ಲಿ ತಾಲ್ಲೂಕು ಮಟ್ಟದ ಟಾಸ್ಕ್ ಫೋರ್ಸ್ ಸಮಿತಿ ಸಭೆಯು ಅತ್ಯಂತ ಯಶಸ್ವಿಯಾಗಿ ಜರುಗಿತು.**

ಸಭೆಯಲ್ಲಿ ಜೂನ್ ತಿಂಗಳ "ಮಲೇ–ರಿಯಾ ವಿರೋಧ ಮಾಸಾಚರಣೆ" ಹಾಗೂ ಜೂನ್ 28 ರಿಂದ ಜುಲೈ 1ರ ವರೆಗೆ ನಡೆಯಲಿರುವ "ರಾಷ್ಟ್ರೀಯ ಪಲ್ಸ್ ಪೋಲಿಯೋ" ಕಾರ್ಯಕ್ರಮಗಳ ಅನುಷ್ಠಾನದ ಕುರಿತು ಸುದೀರ್ಘವಾಗಿ ಚರ್ಚಿಸಲಾಯಿತು. ಈ ವರ್ಷದ ಮಲೇರಿಯಾ ವಿರೋಧ ಮಾಸಾಚರಣೆಯನ್ನು "ಮಲೇ–ರಿಯಾ ಅಂತ್ಯಗೊಳಿಸಲು ಸಂಕಲ್ಪ ಮಾಡೋಣ: ನಮಗಿದು ಸಾಧ್ಯವಿದೆ, ನಾವು ಇದನ್ನು ಮಾಡಲೇಬೇಕು" ಎಂಬ ಘೋಷವಾಕ್ಯದೊಂದಿಗೆ ಪರಿಣಾಮಕಾರಿಯಾಗಿ ಆಚರಿಸಲು ಸಹಿತ






ತಹಶೀಲ್ದಾರರು ಕಟ್ಟುನಿಟ್ಟಿನ ಸೂಚನೆ ನೀಡಿದರು.

ಮಾನ್ಸೂನ್ ಅವಧಿಯಲ್ಲಿ ಈಡಿಸ್ ಸೊಳ್ಳೆಗಳ ಉತ್ಪತ್ತಿ ತಾಣಗಳನ್ನು ನಾಶಪಡಿಸುವುದು, ಶಾಲಾ–ಕಾಲೇಜು ಆವರಣಗಳಲ್ಲಿ ಲಾರ್ವಾ ಸಮೀಕ್ಷೆ ನಡೆಸುವುದು ಮತ್ತು ಪ್ರತಿ ಶನಿವಾರ ಪ್ರೌಢಶಾಲೆಗಳ ಮೂಲಕ ಅರಿವಿನ ಜಾಥಾ ಹಮ್ಮಿಕೊಳ್ಳಲು ತೀರ್ಮಾನಿಸಲಾಯಿತು. ಇದರೊಂದಿಗೆ ವಲಸಿಗ ಜ್ವರ ಪ್ರಕರಣಗಳ ಮೇಲೆ ತೀವ್ರ ನಿಗಾ ಇಡಲು ಮತ್ತು ಆಶಾ ಕಾರ್ಯಕರ್ತೆಯರ ಮೂಲಕ ಮನೆ–ಮನೆ ಭೇಟಿ ನೀಡಿ ಸಾರ್ವಜನಿಕರಲ್ಲಿ ವ್ಯಾಪಕ ಜನಜಾಗೃತಿ ಮೂಡಿಸಲು ಇಲಾಖಾವಾರು ಜವಾಬ್ದಾರಿಗಳನ್ನು ಹಂಚಿಕೆ ಮಾಡಲಾಯಿತು.

ಇದೇ ಸಭೆಯಲ್ಲಿ ದಿನಾಂಕ 28 ಜೂನ್ ರಿಂದ 1ನೇ ಜುಲೈ 2026ರ ವರೆಗೆ ನಡೆಯಲಿರುವ ರಾಷ್ಟ್ರೀಯ ಪಲ್ಸ್ ಪೋಲಿಯೋ ಲಸಿಕಾ ಕಾರ್ಯಕ್ರಮದ ಪೂರ್ವಸಿದ್ಧತೆಗಳನ್ನು ಕೂಡ ಪರಾಮರ್ಶಿಸಲಾಯಿತು. ತಾಲ್ಲೂಕಿನ 0 ಯಿಂದ 5 ವರ್ಷದೊಳಗಿನ ಎಲ್ಲಾ ಅರ್ಹ ಮಕ್ಕಳಿಗೂ ತಪ್ಪದೇ ಪೋಲಿಯೋ ಲಸಿಕೆ ಹಾಕಿ ಶೇ. 100 ರಷ್ಟು ಪ್ರಗತಿ ಸಾಧಿಸಲು ಆರೋಗ್ಯ, ಶಿಕ್ಷಣ ಮತ್ತು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಗಳು ಸಮನ್ವಯತೆಯಿಂದ ಕೆಲಸ ಮಾಡಬೇಕೆಂದು ಆದೇಶಿಸಲಾಯಿತು.

ವಿಶೇಷವಾಗಿ ಇಟ್ಟಿಗೆ ಭಟ್ಟಿ, ಅಲೆಮಾರಿ ತಾಣಗಳು ಹಾಗೂ ದುರ್ಗಮ ಪ್ರದೇಶಗಳ ವಲಸಿಗ ಮಕ್ಕಳ ಮೇಲೆ ವಿಶೇಷ ಕಣ್ಗಾವಲು ಇಟ್ಟು ಮೊಬೈಲ್ ತಂಡಗಳ ಮೂಲಕ ಲಸಿಕೆ ತಲುಪಿಸಲು ರೂಪುರೇಷೆ ಸಿದ್ಧಪಡಿಸಲಾಯಿತು. ಬೂತ್ ದಿನದ ನಂತರ ಆರೋಗ್ಯ ಸಿಬ್ಬಂದಿ ಮನೆ–ಮನೆಗೆ ಭೇಟಿ ನೀಡಿ ಯಾವುದೇ ಮಗು ಲಸಿಕೆಯಿಂದ ವಂಚಿತವಾಗದಂತೆ ಕ್ರಾಸ್ ವೆ–ರಿಫಿಕೇಶನ್ ಮಾಡಲಿದ್ದಾರೆ. ರಾಷ್ಟ್ರೀಯ ಮಹತ್ವದ ಈ ಎರಡೂ ಆರೋಗ್ಯ ಅಭಿಯಾನಗಳಲ್ಲಿ ಸಾರ್ವಜನಿಕರ ಹಾಗೂ ಸಮುದಾಯದ ಸಹಭಾಗಿತ್ವವನ್ನು ಖಚಿತಪಡಿಸಿಕೊಳ್ಳುವುದು ಅತ್ಯಂತ ಅಗತ್ಯವಾಗಿದೆ ಎಂದು ತಹಶೀಲ್ದಾರ್ ಅರುಣ್ ದೇಸಾಯಿ ಅವರು ತಿಳಿಸಿದರು.

ಈ ಹಿನ್ನೆಲೆಯಲ್ಲಿ ಟಾಸ್ಕ್ ಫೋರ್ಸ್ ಸಮಿತಿಯ ಎಲ್ಲಾ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ತಮಗೆ ವಹಿಸಿದ ಜವಾಬ್ದಾರಿಗಳನ್ನು ಯಾವುದೇ ಲೋಪವಿಲ್ಲದೆ ಕಟ್ಟುನಿಟ್ಟಾಗಿ ನಿರ್ವಹಿಸಬೇಕೆಂದು ಸಭೆಯಲ್ಲಿ ಕಡಕ್ ಎಚ್ಚರಿಕೆ ನೀಡಲಾಯಿತು.

ಈ ಕಾರ್ಯಮದಲ್ಲಿ ತಾಲೂಕಾ ಪಂಚಾಯತ ಈ.ಓ ಮಂಜುನಾಥ,ನಗರ ಸಭೆಯ ಪೌರಾಯುಕ್ತರಾದ ಪಾಂಡುರಂಗ. ಇಟಗಿ,ತಾಲೂಕಾರೋಗ್ಯಾಧಿಕಾರಿಗಳಾದ ಡಾ. ಅಯ್ಯನಗೌಡ,ನಗರ.ಆ.ಕೇಂದ್ರದ ಡಾ.ಮೇರಿ ಭಂಡಾರಿ,ಡಾ.ಶೃತಿ.ಆರ್ ಮಕ್ಕಳ ತಜ್ಞರು ತಾಯಿ & ಮಕ್ಕಳ ಆಸ್ಪತ್ರೆ ಸಿಂಧನೂರ, ಹಿ.ಆ.ನಿ.ಅಧಿಕಾರಿಗಳಾದ ರಂಗನಾಥ. ಜಿ ,ಸಂಗನಗೌಡ.ಮಾ.ಪಾಟೀಲ್,ವಿ.ಬಿ.ಡಿ ಮೇಲ್ವಿಚಾರಕ ಎಫ್.ಎ.ಹಣಗಿ,ತಾಲೂಕಾ ಬಿ.ಪಿ.ಎಮ್–ತ್ರಿವೇಣಿ ಭಂಡಾರಿ ಭದ್ರೇಶ ಕೆ.ಕೆ.ಆರ್.ಟಿ.ಸಿ,ಸೋಮಲಿಂಗಪ್ಪ ಉಪ ಶಿಕ್ಷಣಾಧಿಕಾರಿಗಳು ಸಿಂಧನೂರು,ಡಾ.ಲಕ್ಷ್ಮಿ ಕೆನಕಿ,ವಿಜಯಲಕ್ಷ್ಮಿ ಗೋವಿನ ಕಾರ್ಮಿಕ ಇಲಾಖೆ,ಮಲ್ಲಿಕಾ ಅರಣ್ಯ ಇಲಾಖೆ, ಜಿಲ್ಲಾ. ಮೇಲ್ವಿಚಾರಕ ರಾಘವೇಂದ್ರ,ಕಿಷನ್ ರಾವ್ ನಗರ.ಸಭೆ,ಆರೋಗ್ಯ ಶಿಕ್ಷಣಾಧಿಕಾರಿಯಾದ ಬಾಲಪ್ಪ ನಾಯಕ ಜವಳಗೇರಾ, ನಗರದ ವ ಎಲ್ಲಪ್ಪ,ಹನುಮಂತ,ತ್ರೆಜಾ,ಕಮಲ,ಶಮಿನಾ,ರ ಾಜೇಶ್ವರಿ,ಶಾಂತಾ ಮತ್ತು ಪ್ರಾ.ಆ.ಕೇಂದ್ರದ ರೋಷನ್ ಬಿ,ಸರಸ್ವತಿ, ಶಾಮು,ಸೋಮನಾಥ–,ಮಲ್ಲಿಕಾರ್ಜುನ, ಕಲ್ಮೇಷ,ಮಂಜುನಾಥ ಹಾರಾಪೂರ,ಫಕೀರಚಂದ,ಪ್ರಕಾಶ ನಾಯಕ, ಆಶಾ.ಕಾ.ಕರ್ತೆಯರು ಹಾಜರಿದ್ದರು

## ಶಿಕ್ಷಣ ಮಾರ್ಗದರ್ಶಿ ವಿಶೇಷ

### ಬ್ಯಾಚುಲರ್ ಆಫ್ ಫ್ಯಾಷನ್ ಡಿಸೈನ್

ಫ್ಯಾಷನ್ ವಿನ್ಯಾಸದಲ್ಲಿ ಬ್ಯಾಚುಲರ್ ಆಫ್ ಡಿಸೈನ್ (ಬಿ.ಡಿ.ಎಸ್) ಅನ್ನು ಒಟ್ಟಾರೆ ಅತ್ಯುತ್ತಮ ಕೋರ್ಸ್ ಎಂದು ವ್ಯಾಪಕವಾಗಿ ಪರಿಗಣಿಸಲಾಗಿದೆ. ಈ ಸಮಗ್ರ 4 ವರ್ಷಗಳ ಪದವಿಪೂರ್ವ ಪದವಿ ಸ್ಕೆಚಿಂಗ್ ಮತ್ತು ಪ್ಯಾಟರ್ನ್ ಮೇಕಿಂಗ್‌ನಿಂದ ಸುಸ್ಥಿರ ವಿನ್ಯಾಸ ಮತ್ತು ಫ್ಯಾಷನ್ ವ್ಯವಹಾರ ನಿರ್ವಹಣೆ, ಹಿರಿಯ ಪಾತ್ರಗಳಿಗೆ ನಿಮ್ಮನ್ನು ಸಿದ್ಧಪಡಿಸುವುದು ಅಥವಾ ನಿಮ್ಮ ಸ್ವಂತ ಲೇಬಲ್ ಅನ್ನು ಪ್ರಾರಂಭಿಸುವವರೆಗೆ ಎಲ್ಲವನ್ನೂ ಒಳಗೊಂಡಿದೆ. "ಅತ್ಯುತ್ತಮ" ಕೋರ್ಸ್ ಅನ್ನು ಆಯ್ಕೆ ಮಾಡುವುದು ನಿಮ್ಮ ವೃತ್ತಿಜೀವನದ ಗುರಿಗಳು ಮತ್ತು ಪ್ರಸ್ತುತ ಸಮಯದ ಚೌಕಟ್ಟನ್ನು ಅವಲಂಬಿಸಿರುತ್ತದೆ:

ಸಮಗ್ರ ವಿನ್ಯಾಸಕ್ಕಾಗಿ (ಬಿ.ಡಿ.ಎಸ್): 4-ವರ್ಷಗಳ ಬ್ಯಾಚುಲರ್ ಆಫ್ ಡಿಸೈನ್ ಉದ್ಯಮದ ಮಾನದಂಡವಾಗಿದೆ. ಇದು ಪ್ರಾಯೋಗಿಕ ತರಬೇತಿ, ಇಂಟರ್ನ್‌ಶಿಪ್‌ಗಳು ಮತ್ತು ಪೋರ್ಟ್‌ಫೋಲಿಯೊ ಅಭಿವೃದ್ಧಿಯನ್ನು ನೀಡುತ್ತದೆ.

ತಾಂತ್ರಿಕ ಮತ್ತು ವೈಜ್ಞಾನಿಕ ಕೌಶಲ್ಯಗಳಿಗಾಗಿ (ಬಿ.ಎಸ್‌ಸಿ): 3-ವರ್ಷಗಳ ಬ್ಯಾಚುಲರ್ ಆಫ್ ಸೈನ್ಸ್ ಫ್ಯಾಬ್ರಿಕ್ ತಂತ್ರಜ್ಞಾನ, ಸಿಎಡಿ ಮತ್ತು ಉಡುಪು ಎಂಜಿನಿಯರಿಂಗ್‌ಗೆ ಒಲವು ತೋರುತ್ತದೆ. ಪರ್ಲ್ ಅಕಾಡೆಮಿ ವೇಗದ ವೃತ್ತಿ ಪ್ರವೇಶಕ್ಕಾಗಿ: ಡಿಪ್ಲೊಮಾ ಅಥವಾ ಪ್ರಮಾಣಪತ್ರ ಕೋರ್ಸ್‌ಗಳು (1 ರಿಂದ 2 ವರ್ಷಗಳು) ವಿವರಣೆ ಅಥವಾ ಉಡುಪು ನಿರ್ಮಾಣದಂತಹ ನಿರ್ದಿಷ್ಟ ಕೌಶಲ್ಯಗಳಲ್ಲಿ ತ್ವರಿತ, ಉದ್ಯೋಗ-ಸಿದ್ಧ ತರಬೇತಿಯನ್ನು ಒದಗಿಸುತ್ತವೆ. ವ್ಯಾಪಾರ ಮತ್ತು ವ್ಯಾಪಾರಕ್ಕಾಗಿ: ಉಡುಪುಗಳ ಚಿಲ್ಲರೆ ವ್ಯಾಪಾರ, ಖರೀದಿ ಮತ್ತು ಮಾರುಕಟ್ಟೆಯ ಮೇಲೆ ಕೇಂದ್ರೀಕರಿಸುತ್ತದೆ, ನೀವು ಫ್ಯಾಷನ್ ಅನ್ನು ಪ್ರೀತಿಸುತ್ತಿದ್ದರೆ ಆದರೆ ಹೊಲಿಗೆಗಿಂತ ಸಂಘಟಿಸಲು ಬಯಸಿದರೆ ಇದು ಸೂಕ್ತವಾಗಿದೆ.

ನಿಮ್ಮ ಕೌಶಲ್ಯಗಳನ್ನು ಬೆಳೆಸಲು ಉನ್ನತ ಫ್ಯಾಷನ್ ಸಂಸ್ಥೆಗಳು ಮತ್ತು ನಿರ್ದಿಷ್ಟ ಕಾರ್ಯಕ್ರಮಗಳನ್ನು ಅನ್ವೇಷಿಸಲು, ಪರ್ಲ್ ಅಕಾಡೆಮಿಯಂತಹ ವೇದಿಕೆಗಳ ಮೂಲಕ ಲಭ್ಯವಿರುವ ಗುರುತಿಸಲ್ಪಟ್ಟ ಆಯ್ಕೆಗಳನ್ನು ಸಂಶೋಧಿಸುವುದು ಅಥವಾ ನಿಜಕ್ಕೂ ವೃತ್ತಿಜೀವನ ಮಾರ್ಗದರ್ಶಿ ಮೂಲಕ ಕೋರ್ಸ್ ರೂಪರೇಷೆಗಳನ್ನು ಅನ್ವೇಷಿಸುವುದನ್ನು ಪರಿಗಣಿಸಿ.

## ಬಿಜೆಪಿ ಅಧಿಕಾರಕ್ಕೆ ಬಂದರೆ ಬಿಡದಿ ಟೌನ್ ಶಿಪ್ ರದ್ದು

ನ್ಯೈಜ್ಯ ದೆಸೆ ನ್ಯೂಸ್

**ಬೆಂಗಳೂರು: ಬಿಡದಿಯಲ್ಲಿ ಟೌನ್‌ಶಿಪ್ ನಿರ್ಮಾಣಕ್ಕೆ ಭೂಸ್ವಾಧೀನದ ಅಂತಿಮ ಅಧಿಸೂಚನೆ ಹೊರಡಿಸಿರುವ ರಾಜ್ಯ ಸರ್ಕಾರದ ನಿರ್ಧಾರವನ್ನು ವಿರೋಧಿಸಿರುವ ಪ್ರತಿಪಕ್ಷ ನಾಯಕ ಆರ್. ಅಶೋಕ್ ಅವರು, ಮುಂದೆ ಬಿಜೆಪಿ ಸರ್ಕಾರ ಅಧಿಕಾರಕ್ಕೆ ಬಂದ ತಕ್ಷಣವೇ ಇಡೀ ಭೂಸ್ವಾಧೀನ ಪ್ರಕ್ರಿಯೆಯನ್ನು ರದ್ದುಪಡಿಸಲಾಗುವುದು ಎಂದು ಹೇಳಿದ್ದಾರೆ.**



ಈ ಬಗ್ಗೆ ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಟ್ವೀಟ್ ಮಾಡಿರುವ ಅವರು, ಭೂಸ್ವಾಧೀನ ವಿರೋಧಿಸಿ ಅನ್ನದಾತರು ಸುಮಾರು 470 ದಿನಗಳಿಂದ ಹೋರಾಟ ನಡೆಸುತ್ತಿದ್ದರೂ ಅದನ್ನು ಲೆಕ್ಕಿಸದೆ ಟೌನ್‌ಶಿಪ್‌ಗಾಗಿ ಫಲವತ್ತಾದ ಕೃಷಿ ಭೂಮಿಯನ್ನು ಕಬಳಿಸಲು ಅಂತಿಮ ಅಧಿಸೂಚನೆ ಹೊರಡಿಸಿರುವುದು ಕಾಂಗ್ರೆಸ್ ಸರ್ಕಾರದ ನಿಜವಾದ ಮುಖವನ್ನು ಬಯಲು ಮಾಡಿದೆ. ಮುಖ್ಯಮಂತ್ರಿಗಳೆ ರಾಜ್ಯದ ರೈತರನ್ನು ನೀವು ದುರ್ಬಲರೆಂದು ಭಾವಿಸಿದ್ದರೆ ಅದು ದೊಡ್ಡ ತಪ್ಪು. ಇನ್ನೊಂದೂವರೆ ವರ್ಷದಲ್ಲಿ ನಿಮ್ಮ ಜನವಿರೋಧಿ ಸರ್ಕಾರ ಇತಿಹಾಸದ ಪುಟ ಸೇರಲಿದೆ ಎಂದಿದ್ದಾರೆ. 2028 ರಲ್ಲಿ ಬಿಜೆಪಿ ಸರ್ಕಾರ ಅಧಿಕಾರಕ್ಕೆ ಬಂದ ತಕ್ಷಣವೇ ಬಿಡದಿಯ ಟೌನ್‌ಶಿಪ್ ಭೂಸ್ವಾಧೀನ ಪ್ರಕ್ರಿಯೆಯನ್ನು ಅಧಿಕೃತವಾಗಿ ರದ್ದುಪಡಿಸಿ ರೈತರಿಗೆ ಕೊಟ್ಟಿರುವ ಮಾತನ್ನು ನಾವು ಉಳಿಸಿಕೊಳ್ಳುತ್ತೇವೆ ಎಂದು ಹೇಳಿದ್ದಾರೆ. ರೈತರ ಜಮೀನಿನ ಮೇಲೆ ಬುಲ್ಡೋಜರ್ ಉರುಳಿಸಿ ರಿಯಲ್ ಎಸ್ಟೇಟ್ ಸಾಮ್ರಾಜ್ಯ ಕಟ್ಟಲು ಹೊರಟಿರುವ ಕಮೀಷನ್ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ರವರೆ ಅನ್ನದಾತರ ಆಕ್ರೋಶದ ಜ್ವಾಲೆಯಲ್ಲಿ ಕಾಂಗ್ರೆಸ್ ಸರ್ಕಾರ ಭಸ್ಮವಾಗುತ್ತದೆ ಎಂದು ಅವರು ಎಚ್ಚರಿಸಿದ್ದಾರೆ. ಅನ್ನದಾತರ ಹೊಟ್ಟೆಗೆ ಹೊಡೆದು ಕಟ್ಟುವ ಯಾವುದೇ ಟೌನ್‌ಶಿಪ್ ಅಭಿವೃದ್ಧಿಯಲ್ಲ. ಅದು ರೈತರ ಭವಿಷ್ಯದ ಸಮಾಧಿ. ಸರ್ಕಾರ ಕೂಡಲೇ ಈ ಭೂಸ್ವಾಧೀನ ಪ್ರಕ್ರಿಯೆಯನ್ನು ಹಿಂಪಡೆಯಬೇಕು. ಇಲ್ಲವಾದರೆ ರೈತರ ಆಕ್ರೋಶದ ಜ್ವಾಲೆಯನ್ನು ಸರ್ಕಾರ ಭಸ್ಮವಾಗುತ್ತದೆ ಎಂದು ಹೇಳಿದ್ದಾರೆ.

## ಸಚಿವ ಸ್ಥಾನಾಕಾಂಕ್ಷೆ ವ್ಯಕ್ತಪಡಿಸಿದ ಶಾಸಕ ನಾಡಗೌಡ; ಗುತ್ತಿಗೆದಾರರ ವಿರುದ್ಧ ಅಸಮಾಧಾನ

ನ್ಯೈಜ್ಯ ದೆಸೆ ನ್ಯೂಸ್

**ಮುದ್ದೇಬಿಹಾಳ: ಮತಕ್ಷೇತ್ರದ ಅಭಿವೃದ್ಧಿ ವಿಚಾರದಲ್ಲಿ ಯಾವುದೇ ರೀತಿಯ ಮುಲಾಜು ತೋರಿಸುವ ಪ್ರಶ್ನೆಯೇ ಇಲ್ಲ ಎಂದು ಶಾಸಕ ಸಿ.ಎಸ್. ನಾಡಗೌಡ ಸ್ಪಷ್ಟಪಡಿಸಿದರು. ತಾವು ಯಾರಿಂದಲೂ ಕಮಿಷನ್ ಪಡೆದಿಲ್ಲ ಎಂದು ಹೇಳಿದ ಅವರು, "ನಾನು ಕಮಿಷನ್ ಗಿರಾಕಿ ಅಲ್ಲ. ಯಾರಾದರೂ ನನಗೆ ಕಮಿಷನ್ ನೀಡಿದ್ದರೆ ನನ್ನ ಎದುರು ಬಂದು ದೇವರ ಮೇಲೆ ಆಣೆ ಮಾಡಿ ಹೇಳಲಿ" ಎಂದು ಸವಾಲು ಹಾಕಿದರು.**

ಪಟ್ಟಣದ ತಮ್ಮ ಗೃಹ ಕಚೇರಿಯಲ್ಲಿ ಶನಿವಾರ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಸರ್ಕಾರ ಮುದ್ದೇಬಿಹಾಳ ಕ್ಷೇತ್ರಕ್ಕೆ ಸಾಕಷ್ಟು ಅನುದಾನ ನೀಡಿದ್ದು, ಜಿಲ್ಲೆಯಲ್ಲಿಯೇ ಬಬಲೇಶ್ವರ ಕ್ಷೇತ್ರವನ್ನು



ಹೊರತುಪಡಿಸಿದರೆ ಹೆಚ್ಚಿನ ಅನುದಾನ ಪಡೆದ ಕ್ಷೇತ್ರ ಮುದ್ದೇಬಿಹಾಳವಾಗಿದೆ ಎಂದು ಹೇಳಿದರು. ಕೆಲವು ಗುತ್ತಿಗೆದಾರರು ಅಭಿವೃದ್ಧಿಗಿಂತ ರಾಜಕಾರಣಕ್ಕೆ ಹೆಚ್ಚು ಒತ್ತು ನೀಡುತ್ತಿದ್ದಾರೆ ಎಂದು ಆರೋಪಿಸಿದ ಅವರು, ಕ್ರಿಕೆಟ್ ಪಂದ್ಯಾವಳಿ ಹಾಗೂ ಗಣೇಶೋತ್ಸವಗಳಿಗೆ ಹಣ ವೆಚ್ಚ ಮಾಡುವ ಬದಲು ರಸ್ತೆ ಸೇರಿದಂತೆ ವಿವಿಧ ಅಭಿವೃದ್ಧಿ ಕಾಮಗಾರಿಗಳನ್ನು ಗುಣಮಟ್ಟದಿಂದ ಪೂರ್ಣಗೊಳಿಸಬೇಕು ಎಂದು ಸಲಹೆ ನೀಡಿದರು.

"ಒಕ್ಕಲಿಗನಾಗಲು ಏನು ಬೇಕು ಎಂಬುದೇ ಕೆಲವರಿಗೆ ತಿಳಿದಿಲ್ಲ. ಕೇವಲ ಹಸಿರು ಟವೆಲ್ ಹಾಕಿಕೊಂಡು ರಾಜಕಾರಣ ಮಾಡುತ್ತಿದ್ದಾರೆ" ಎಂದು ಟೀಕಿಸಿದ ಅವರು, ನಾಗರಬೆಟ್ಟ ಏತ ನೀರಾವರಿ ಯೋಜನೆ ಜಾರಿಯಾದ ಸಂದರ್ಭದಲ್ಲಿ ಇಂದು ರೈತರ ಹೆಸರಿನಲ್ಲಿ ರಾಜಕಾರಣ ಮಾಡುತ್ತಿರುವ ಹಲವರು ರಾಜಕೀಯ ಕ್ಷೇತ್ರದಲ್ಲೇ ಇರಲಿಲ್ಲ ಎಂದು ವ್ಯಂಗ್ಯವಾಡಿದರು. ಜನರ ಋಣ ನಮ್ಮ ಮೇಲಿದೆ. ಸ್ಥಳೀಯ ಸಮಸ್ಯೆಗಳು ಹಾಗೂ ಅಭಿವೃದ್ಧಿ ಕಾಮಗಾರಿಗಳನ್ನೇ ಆಧಾರವಾಗಿಟ್ಟುಕೊಂಡು ರಾಜಕಾರಣ ಮಾಡಿದ್ದೇನೆ ಎಂದು ಹೇಳಿದ ಅವರು, ಕ್ಷೇತ್ರದಲ್ಲಿ ನಡೆಯುತ್ತಿರುವ ಕಾಮಗಾರಿಗಳ ಬಗ್ಗೆ ಅಧಿಕಾರಿಗಳು ಕಟ್ಟುನಿಟ್ಟಿನ ನಿಗಾ ವಹಿಸಬೇಕು ಎಂದು ಸೂಚಿಸಿದರು. ಅರ್ಧಮರ್ಧ ಕಾಮಗಾರಿ ನಡೆಸುವ ಗುತ್ತಿಗೆದಾರರನ್ನು ಕಪ್ಪುಪಟ್ಟಿಗೆ ಸೇರಿಸುವ ಅಗತ್ಯವಿದೆ ಎಂದರು.

"ಯಾವೊಬ್ಬ ಗುತ್ತಿಗೆದಾರನ ಸಹಾಯದಿಂದ ನಾನು ಚುನಾವಣೆಯಲ್ಲಿ ಗೆದ್ದಿಲ್ಲ. ಗುತ್ತಿಗೆದಾರರ ಅವಶ್ಯಕತೆ ನಮಗಿಲ್ಲ" ಎಂದು ಸ್ಪಷ್ಟಪಡಿಸಿದ ಅವರು, ಮಾಧ್ಯಮಗಳು ವರದಿ ಮಾಡುವಾಗ ವಿಷಯದ ಸೂಕ್ಷ್ಮತೆಯನ್ನು ಅರಿತು ಕಾರ್ಯನಿರ್ವಹಿಸಬೇಕು ಎಂದು ಹೇಳಿದರು. ತಪ್ಪು ಮಾಡಿದವರ ವಿರುದ್ಧ ನಿರ್ಭಯವಾಗಿ ವರದಿ ಮಾಡಲಿ, ಆದರೆ ಪ್ರತಿಯೊಂದು ವಿಚಾರಕ್ಕೂ ಶಾಸಕರನ್ನು ಎಳೆದು ತರುವುದು ನ್ಯಾಯವೇ ಎಂಬ ಪ್ರಶ್ನೆಯನ್ನು ಎತ್ತಿದರು. ಈ ವೇಳೆ ಸಚಿವ ಸಂಪುಟ ವಿಸ್ತರಣೆ ಕುರಿತು ಕೇಳಿದ ಪ್ರಶ್ನೆಗೆ ಪ್ರತಿಕ್ರಿಯಿಸಿದ ಶಾಸಕ ನಾಡಗೌಡ, ಪಕ್ಷದ ನಾಯಕತ್ವ ಅವಕಾಶ ನೀಡಿದರೆ ಸಚಿವರಾಗಿ ಇನ್ನಷ್ಟು ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳುವ ಆಸೆ ಹೊಂದಿದ್ದೇನೆ ಎಂದು ತಿಳಿಸಿದರು.

## ಮುಂಗಾರಿಗೆ ಎಲ್‌ನಿನೋ ಅಡ್ಡಗಾಲು : ಅನ್ನದಾತರ ಆತಂಕ

ನ್ಯೈಜ್ಯ ದೆಸೆ ನ್ಯೂಸ್

**ಬೆಂಗಳೂರು: ಮುಂಗಾರು ಮಳೆ ಆರಂಭವಾಗುತ್ತಿದ್ದಂತೆಯೇ ಉತ್ತಮ ಮಳೆಯ ನಿರೀಕ್ಷೆಯಲ್ಲಿದ್ದ ಜನರಿಗೆ ಇದೀಗ ನಿರಾಸೆಯ ಸುದ್ದಿ ಎದುರಾಗಿದೆ. ರಾಜ್ಯದಲ್ಲಿ ಜೂನ್ ಮೊದಲ ವಾರದಲ್ಲಿ ಮುಂಗಾರು ಪ್ರವೇಶಿಸಿದರೂ, ಆರಂಭಿಕ ಚುರುಕಿನ ನಂತರ ಮಳೆಯ ಪ್ರಮಾಣದಲ್ಲಿ ಕುಸಿತ ಕಂಡುಬಂದಿದ್ದು, ಮುಂದಿನ ದಿನಗಳಲ್ಲಿಯೂ ನಿರೀಕ್ಷೆಗಿಂತ ಕಡಿಮೆ ಮಳೆಯಾಗುವ ಸಾಧ್ಯತೆ ಇದೆ ಎಂದು ಹವಾಮಾನ ತಜ್ಞರು ಅಭಿಪ್ರಾಯಪಟ್ಟಿದ್ದಾರೆ.**

ಜೂನ್ 4ರಿಂದ ರಾಜ್ಯದಲ್ಲಿ ಮುಂಗಾರು ಮಳೆ ಆರಂಭವಾಗಿದ್ದು, ಈ ಬಾರಿ ಉತ್ತಮ ಮಳೆಯ ನಿರೀಕ್ಷೆಯಲ್ಲಿ ರೈತರು ಬಿತ್ತನೆ ಕಾರ್ಯಗಳಿಗೆ ಸಿದ್ಧತೆ ನಡೆಸಿದ್ದರು. ಆದರೆ ಮುಂಗಾರು ಆರಂಭವಾಗಿ ಕೇವಲ ಒಂದು ವಾರ ಕಳೆದಿದ್ದರೂ ಮಳೆಯ ತೀವ್ರತೆ ಕಡಿಮೆಯಾಗಿದ್ದು, ಹಲವು ಜಿಲ್ಲೆಗಳಲ್ಲಿ ಮಳೆ ವಿರಳವಾಗಿದೆ. ಇದರಿಂದ ರೈತಾಪಿ ವರ್ಗದಲ್ಲಿ ಆತಂಕ ಹೆಚ್ಚಾಗಿದೆ.

ತಜ್ಞರ ಪ್ರಕಾರ, ಪೆಸಿಫಿಕ್ ಮಹಾಸಾಗರದ ಮಧ್ಯ ಹಾಗೂ ಪೂರ್ವ ಭಾಗಗಳಲ್ಲಿ



ಸಮುದ್ರದ ಮೇಲ್ಮೈ ತಾಪಮಾನ ಅಸಹಜವಾಗಿ ಏರಿಕೆಯಾಗುತ್ತಿರುವುದು ಪ್ರಮುಖ ಕಾರಣವಾಗಿದೆ. ಈ ಹವಾಮಾನ ಸ್ಥಿತಿಯನ್ನು "ಎಲ್‌ನಿನೋ" ಎಂದು ಕರೆಯಲಾಗುತ್ತದೆ. ಎಲ್‌ನಿನೋ ಪರಿಣಾಮದಿಂದ ಜಾಗತಿಕ ಹವಾಮಾನ ವ್ಯವಸ್ಥೆಯಲ್ಲಿ ಬದಲಾವಣೆ ಉಂಟಾಗಿ, ಭಾರತದ ಮುಂಗಾರು ಮಳೆಯ ಪ್ರಮಾಣ ಮತ್ತು ಹಂಚಿಕೆಯಲ್ಲಿ ವ್ಯತ್ಯಾಸ ಕಂಡುಬರುತ್ತದೆ. ಸಾಮಾನ್ಯವಾಗಿ ಎಲ್‌ನಿನೋ ಸಂಭವಿಸುವ ವರ್ಷಗಳಲ್ಲಿ ಮಳೆ ಪ್ರಮಾಣ ಕಡಿಮೆಯಾಗುವ ಸಾಧ್ಯತೆ ಹೆಚ್ಚಿರುತ್ತದೆ ಎಂದು ಹವಾಮಾನ ತಜ್ಞರು ವಿವರಿಸುತ್ತಾರೆ.

ಕರ್ನಾಟಕದಲ್ಲೂ ಇದರ ಪರಿಣಾಮ ಗೋಚರಿಸುವ ಸಾಧ್ಯತೆ ಇದೆ. ಕರಾವಳಿ ಮತ್ತು ಮಲೆನಾಡು ಭಾಗಗಳಲ್ಲಿ ಉತ್ತಮ ಮಳೆಯಾಗುವ ನಿರೀಕ್ಷೆ ಇದ್ದರೂ, ದಕ್ಷಿಣ ಒಳನಾಡು ಮತ್ತು ಉತ್ತರ ಒಳನಾಡಿನ ಸುಮಾರು 19 ಜಿಲ್ಲೆಗಳಲ್ಲಿ ವಾಡಿಕೆಗಿಂತ ಕಡಿಮೆ ಮಳೆಯಾಗುವ ಸಾಧ್ಯತೆ ಇದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

ಬಿತ್ತನೆ ಸಮಯದಲ್ಲೇ ಮಳೆಯ ಕೊರತೆ ಎದುರಾಗುವ ಸಾಧ್ಯತೆಯಿಂದ ರೈತರು ಕಳವಳಗೊಂಡಿದ್ದಾರೆ. ಬೆಂಗಳೂರು ಸೇರಿದಂತೆ ರಾಜ್ಯದ ಹಲವು ಭಾಗಗಳಲ್ಲಿ ಮುಂದಿನ ಒಂದು ವಾರ ಮಳೆಯ ಚಟುವಟಿಕೆ ಕಡಿಮೆಯಾಗುವ ಸಾಧ್ಯತೆ ಇದೆ. ಒಟ್ಟಾರೆ ಈ ಬಾರಿ ಮಳೆಯ ಪ್ರಮಾಣ ವಾಡಿಕೆಗಿಂತ ಶೇ.8 ರಿಂದ 10 ರಷ್ಟು ಕಡಿಮೆಯಾಗುವ ಸಾಧ್ಯತೆ ಇದೆ ಎಂದು ಅಂದಾಜಿಸಲಾಗಿದೆ.

ಈ ಹಿನ್ನೆಲೆಯಲ್ಲಿ ಹೆಚ್ಚು ನೀರಿನ ಅವಶ್ಯಕತೆ ಇರುವ ಬೆಳೆಗಳ ಬದಲಿಗೆ ಕಡಿಮೆ ನೀರಿನ ಅವಶ್ಯಕತೆ ಇರುವ ಬೆಳೆಗಳನ್ನು ಆಯ್ಕೆ ಮಾಡಿಕೊಳ್ಳುವಂತೆ ಹವಾಮಾನ ತಜ್ಞರು ರೈತರಿಗೆ ಸಲಹೆ ನೀಡಿದ್ದಾರೆ. ಎಲ್‌ನಿನೋ ಪರಿಣಾಮದಿಂದ ಮುಂಗಾರು ಆರಂಭದಲ್ಲೇ ಹಿನ್ನಡೆ ಕಂಡಿದ್ದು, ಮಳೆ ಅವಲಂಬಿತ ಕೃಷಿ ನಡೆಸುವ ರೈತರು ಹಾಗೂ ಸಾರ್ವಜನಿಕರಲ್ಲಿ ಆತಂಕ ಮೂಡಿಸಿರುವುದು ವಾಸ್ತವ. ಮುಂದಿನ ವಾರಗಳಲ್ಲಿ ಹವಾಮಾನದಲ್ಲಿ ಏನಾದರೂ ಬದಲಾವಣೆ ಆಗುತ್ತದೆಯೇ ಎಂಬುದರತ್ತ ಎಲ್ಲರ ಚಿತ್ತ ನೆಟ್ಟಿದೆ.

## ಗೃಹ ಸಚಿವ ಪ್ರಿಯಾಂಕ್ ಖರ್ಗೆ ವಿರುದ್ಧ ಆರ್.ಅಶೋಕ್ ಹಿಗ್ಗಾಮುಗ್ಗಾ ವಾಗ್ದಾಳಿ

ನ್ಯೈಜ್ಯ ದೆಸೆ ನ್ಯೂಸ್

**ಬೆಂಗಳೂರು: ಟ್ವಿಟರ್‌ನಲ್ಲಿ ಸಂವಿಧಾನ ಉಳಿಸುವ ಗೃಹ ಸಚಿವ ಪ್ರಿಯಾಂಕ್ ಖರ್ಗೆ ಅವರಿಗೆ, ತಮ್ಮ ಸ್ವಂತ ಜಿಲ್ಲೆಯ ಕಾಲೇಜಿನ ಮೇಲ್ಛಾವಣಿಯನ್ನೂ ಉಳಿಸಿಕೊಳ್ಳುವ ಯೋಗ್ಯತೆಯೂ ಇಲ್ಲ ಎಂದು ವಿಧಾನಸಭೆಯ ಪ್ರತಿಪಕ್ಷದ ನಾಯಕ ಆರ್.ಅಶೋಕ್ ಕೆಂಡಕಾರಿದ್ದಾರೆ.**

ಎಕ್ಸ್ ನಲ್ಲಿ ಪೋಸ್ಟ್ ಮಾಡಿರುವ ಅವರು, ದಿನಬೆಳಗಾದರೆ ಸಾಮಾಜಿಕ ಜಾಲತಾಣಗಳಲ್ಲಿ, ಮಾಧ್ಯಮಗಳ ಮುಂದೆ ಜ್ಞಾನ ಬೋಧನೆ, ಬೆಳಗ್ಗೆಯಿಂದ ಸಂಜೆವರೆಗೆ ಬಿಜೆಪಿ, ಆರ್ ಎಸ್ ಎಸ್ , ಇತಿಹಾಸ, ಕೇಂದ್ರ ಸರ್ಕಾರ, ಸಂವಿಧಾನ, ಪ್ರಜಾಪ್ರಭುತ್ವದ ಬಗ್ಗೆ ದೊಡ್ಡ ದೊಡ್ಡ ಭಾಷಣ. ಆದರೆ ನಿಮದೇ ಸ್ವಂತ ಜಿಲ್ಲೆಯಾದ ಕಲಬುರಗಿಯ ಸರ್ಕಾರಿ ಕಾಲೇಜಿನ ದುಸ್ಥಿತಿ ನೋಡಲು ಮಾತ್ರ ನಿಮಗೆ ಪುರುಸೊತ್ತಿಲ್ಲವೇ ಎಂದು ತರಾಟೆಗೆ ತೆಗೆದುಕೊಂಡಿದ್ದಾರೆ.

ಕಲಬುರಗಿ ನಗರದ ಸರ್ಕಾರಿ ಪದವಿಪೂರ್ವ ಬಾಲಕಿಯರ ಕಾಲೇಜಿನಲ್ಲಿ ತರಗತಿ ನಡೆಯುತ್ತಿದ್ದಾಗಲೇ ಮೇಲ್ಛಾವಣಿಯ ಸಿಮೆಂಟ್ ಪದರು ಕುಸಿದು ಬಿದ್ದು 5 ವಿದ್ಯಾರ್ಥಿನಿಯರು ತೀವ್ರವಾಗಿ ಗಾಯಗೊಂಡಿದ್ದಾರೆ! 80ಕ್ಕೂ ಹೆಚ್ಚು ವಿದ್ಯಾರ್ಥಿನಿಯರು ತರಗತಿಯಲ್ಲಿದ್ದ ಸಂದರ್ಭದಲ್ಲಿ ಈ ಭೀಕರ ಘಟನೆ ನಡೆದಿದೆ ಎಂದರೆ ಇದು ಕೇವಲ ಅಪಘಾತವಲ್ಲ, ಇದು ನಿಮ ಕಾಂಗ್ರೆಸ್ ಸರ್ಕಾರದ ಜವಾಬ್ದಾರಿರಹಿತ



ನಿರ್ಲಕ್ಷ್ಯದ ಪರಮಾವಧಿ!ಅಸಲಿಗೆ ನಿಮ ಆದ್ಯತೆಯಾದರೂ ಏನು ಪ್ರಿಯಾಂಕ್ ಖರ್ಗೆ ಅವರೇ, ಬರೀ ಚಿಲ್ಲರೆ ರಾಜಕೀಯವೋ ಅಥವಾ ಆಡಳಿತ ಮಾಡುವ ಆಸಕ್ತಿ ಏನಾದರೂ ಇದೆಯೋ? ಎಂದು ಪ್ರಶ್ನೆ ಮಾಡಿದ್ದಾರೆ.

ಸ್ವಂತ ಜಿಲ್ಲೆಯ ಕಾಲೇಜು ಕಟ್ಟಡಗಳು ಕಣ್ಣೆದುರೇ ಕುಸಿಯುತ್ತಿವೆ. ನಿಮ್ಮ ನಿರ್ಲಕ್ಷ್ಯದಿಂದ ವಿದ್ಯಾರ್ಥಿನಿಯರು ತರಗತಿಯಲ್ಲೇ ಗಾಯಗೊಂಡು ಆಸ್ಪತ್ರೆ ಸೇರುತ್ತಿದ್ದಾರೆ. ಆದರೆ ನೀವು ಮಾತ್ರ ಸದಾ ಕಾಲ ಸಾಮಾಜಿಕ ಜಾಲತಾಣದಲ್ಲಿ ಹೊಸ ಹೊಸ ರಾಜಕೀಯ ವಿವಾದಗಳ ಹುಡುಕಾಟದಲ್ಲಿ ನಿರತರಾಗಿದ್ದೀರಿ!ಸ್ವಂತ ಜಿಲ್ಲೆಯ ಹೆಣ್ಣುಮಕ್ಕಳು ಕಲಿಯುವ ಕಾಲೇಜಿನ ಮೇಲ್ಛಾವಣಿಯನ್ನೇ ಭದ್ರವಾಗಿ ಉಳಿಸಿಕೊಳ್ಳಲಾಗದವರು, ಇಡೀ ರಾಜ್ಯದ, ದೇಶದ, ಸಂವಿಧಾನದ ಭವಿಷ್ಯದ ಬಗ್ಗೆ ಭಾಷಣ ಬಿಗಿಯುವುದು ಎಷ್ಟು ದೊಡ್ಡ ವಿಪರ್ಯಾಸ! ಎಂದು ವಿಷಾದಿಸಿದ್ದಾರೆ.

ಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಅವರೇ,ಇದು ಕೇವಲ ಕಟ್ಟಡದ ಮೇಲ್ಛಾವಣಿ ಕುಸಿದ ಘಟನೆ ಅಲ್ಲ, ಇದು ನಿಮ ಕಾಂಗ್ರೆಸ್ ಸರ್ಕಾರದ ಆಡಳಿತವೇ ಸಂಪೂರ್ಣವಾಗಿ ಕುಸಿದು ಬಿದ್ದಿರುವುದರ ಜೀವಂತ ಸಂಕೇತ!ನಮ ಆಗ್ರಹ ಇಷ್ಟೇ. ಈಗಲಾದರೂ ಸರ್ಕಾರ ಎಚ್ಚೆತ್ತುಕೊಂಡು ಗಾಯಗೊಂಡ ವಿದ್ಯಾರ್ಥಿನಿಯರಿಗೆ ತಕ್ಷಣ ಉನ್ನತ ಮಟ್ಟದ ಉಚಿತ ಚಿಕಿತ್ಸೆ ನೀಡಬೇಕು. ಈ ಗಂಭೀರ ನಿರ್ಲಕ್ಷ್ಯಕ್ಕೆ ಕಾರಣರಾದ ಅಧಿಕಾರಿಗಳ ವಿರುದ್ಧ ತಕ್ಷಣ ಕ್ರಿಮಿನಲ್ ಪ್ರಕರಣ ದಾಖಲಿಸಬೇಕು.ರಾಜ್ಯದ ಎಲ್ಲಾ ಸರ್ಕಾರಿ ಶಾಲಾ-ಕಾಲೇಜುಗಳ ಸುರಕ್ಷತಾ ಲೆಕ್ಕಪರಿಶೋಧನೆಯನ್ನು ತಕ್ಷಣವೇ ನಡೆಸಬೇಕು. ಇಲ್ಲವಾದರೆ, ಮಕ್ಕಳ ಜೀವದ ಚೆಲ್ಲಾಟವಾಡುತ್ತಿರುವ ಕಾಂಗ್ರೆಸ್ ಪಕ್ಷವನ್ನ ಕರ್ನಾಟಕದ ಜನತೆ ಎಂದಿಗೂ ಕ್ಷಮಿಸುವುದಿಲ್ಲ ಎಂದು ಎಚ್ಚರಿಸಿದ್ದಾರೆ.

ಅಕ್ಕಿ ಕಳ್ಳರನ್ನು ಜೈಲಿಗಟ್ಟಿ ಮತ್ತೊಂದು ಪೋಸ್ಟ್ ನಲ್ಲಿ ಬಡವರ ಹೊಟ್ಟೆಯ ಮೇಲೆ ಹೊಡೆಯುತ್ತಿರುವ ಈ ಲೂಟಿ ಸರ್ಕಾರದ ವಿರುದ್ಧ ಜನ ದಂಗೆ ಏಳುವ ದಿನ ಬಹಳ ದೂರವಿಲ್ಲ. ಮುಖ್ಯಮಂತ್ರಿಗಳೇ, ನಿಮ್ಮ ಮೂಗಿನ ಕೆಳಗೆ ನಡೆಯುತ್ತಿರುವ ಈ ಹಗರಣಕ್ಕೆ ನಿಮ ಉತ್ತರವೇನು ಸ್ವಾಮಿ? ಇದೇನಾ ನಿಮ ಪಾರದರ್ಶಕತೆ? ಇದೇನಾ ನಿಮ ಕಾರ್ಯವೈಖರಿ? ನಿಮಗೆ ಕಿಂಚಿತ್ತಾದರೂ ಆತಸಾಕ್ಷಿ ಇದ್ದರೆ ತಕ್ಷಣವೇ ಈ ಅಕ್ಕಿ ಮಾಫಿಯಾದ ಸೂತ್ರಧಾರರನ್ನು ಜೈಲಿಗಟ್ಟಿ ಎಂದು ಅಶೋಕ್ ಆಕ್ರೋಶ ವ್ಯಕ್ತಪಡಿಸಿದ್ದಾರೆ.

## ನಕಲಿ ಮತಗಳನ್ನು ಉಳಿಸಿಕೊಳ್ಳಲು ಕಾಂಗ್ರೆಸ್ ಕಸರತ್ತು : ಮಾಜಿ ಶಾಸಕ ಟಿ.ಎಚ್.ಸುರೇಶಬಾಬು ಆರೋಪ

ನ್ಯೈಜ್ಯ ದೆಸೆ ನ್ಯೂಸ್

**ಬಳ್ಳಾರಿ / ಕಂಪ್ಲಿ : ಚುನಾವಣಾ ಆಯೋಗವು ಎಸ್‌ಐಆರ್ ಮೂಲಕ ಮತದಾರರ ಪಟ್ಟಿಯನ್ನು ಪಾರದರ್ಶಕವಾಗಿಟ್ಟುಕೊಳ್ಳಲು ಮುಂದಾಗಿದೆ. ಆದರೆ, ನಕಲಿ ಮತಗಳನ್ನು ಉಳಿಸಿಕೊಳ್ಳಲು ಕಾಂಗ್ರೆಸ್ ಕಸರತ್ತು ಮಾಡುತ್ತಿದೆ ಎಂದು ಮಾಜಿ ಶಾಸಕ ಟಿ.ಎಚ್.ಸುರೇಶಬಾಬು ಆರೋಪಿಸಿದರು.**

ಸ್ಥಳೀಯ ಕೊಟ್ಟಾಲ್ ರಸ್ತೆಯ ಮಾಜಿ ಶಾಸಕರ ತುಂಗಭದ್ರ ಕಾರ್ಯಾಲಯದಲ್ಲಿ ಬಿಜೆಪಿ ಜಿಲ್ಲಾ, ಕಂಪ್ಲಿ ಮಂಡಲದ ಕಂಪ್ಲಿ ಕ್ಷೇತ್ರದ ಬಿಎಲ್‌ಎ-2 ಕಾರ್ಯಾಗಾರ ಉದ್ಘಾಟಿಸಿ ಮಾತನಾಡಿ, ಮತದಾರರ ಪಟ್ಟಿ ಪರಿಷ್ಕರಣೆಗೆ ಬಿಜೆಪಿ ಬೆಂಬಲ ನೀಡುವ ಜೊತೆಗೆ ಕಂಪ್ಲಿ ಕ್ಷೇತ್ರದ ಪ್ರತಿ ಬೂತ್ ಮತ್ತು ಪಟ್ಟಣ, ಗ್ರಾಮೀಣ ಪ್ರದೇಶದಲ್ಲಿ ಮತದಾರರ ಪಟ್ಟಿಗಳನ್ನು ಪರಿಶೀಲಿಸುವ ಕಾರ್ಯವನ್ನು ಬಿಎಲ್‌ಎ1 ಘಟಕದ ಕಾರ್ಯಕರ್ತರು ಮಾಡಬೇಕು. ಈಗಾಗಲೇ ಸಾಕಷ್ಟು ರಾಜ್ಯಗಳಲ್ಲಿ ಕಾಂಗ್ರೆಸ್ ಅಧಿಕಾರ ಕಳೆದುಕೊಂಡು ಬಹುತೇಕವಾಗಿ ಬಿಜೆಪಿ ಬಾವುಟ ಹಾರಿದೆ. ಈಗ ಕರ್ನಾಟದ ಸರದಿಯಲ್ಲಿದ್ದು, ಬರುವ ಚುನಾವಣೆಯಲ್ಲಿ ಬಿಜೆಪಿ ಅಧಿಕಾರದ




ಪಟ್ಟಕ್ಕೇರುವುದು ನಿಶ್ಚಿತ. ಕಳೆದ ಅವಧಿಯಲ್ಲಿ ಸುಳ್ಳು ಭರವಸೆ, ಆಶ್ವಾಸನೆ ಮೂಲಕ ಕಾಂಗ್ರೆಸ್ ಅಧಿಕಾರಕ್ಕೆ ಬಂದಿದೆ. ಹಿಂದಿನ ಬಿಜೆಪಿ ಅಧಿಕಾರದಲ್ಲಿ ಸೇತುವೆ ಮಂಜೂರು ಮಾಡಿಸಲಾಗಿತ್ತು.

ಆದರೆ, ಸ್ಥಳೀಯ ಶಾಸಕ ಆರ್ಥಿಕ ಇಲಾಖೆಯಿಂದ ಬಿಲ್ ಕ್ಲಿಯರ್ ಮಾಡಿ, ಸೇತುವೆ ಮಾಡುವುದಕ್ಕೆ ಆಗುತ್ತಿಲ್ಲ. ಕಳೆದ ಮೂರು ವರ್ಷದಲ್ಲಿ ಬಹುದಿನದ ಬೇಡಿಕೆಯಾಗಿರುವ ಕಂಪ್ಲಿ ಸೇತುವೆಗೆ ಅನುದಾನ ಮಂಜೂರು ಮಾಡಿಸುವುದಕ್ಕೆ ಆಗಿಲ್ಲ. ಕಮಿಷನ್ ದಂಧೆ ನಡೆಯುತ್ತಿದ್ದು, ಅಭಿವೃದ್ಧಿ ಮರಿಚಿಕೆಯಾಗಿದೆ. ಈಗಾಗಲೇ ಕಾಂಗ್ರೆಸ್ ದುರಾಳಿತಕ್ಕೆ ಜನ ರೋಸಿ ಹೋಗಿದ್ದು, ಬಿಜೆಪಿ ಅಧಿಕಾರಕ್ಕೆ ಬರಬೇಕೆಂಬುದು ಬಹುಜನರ ಆಸೆಯಾಗಿದೆ. ಆದ್ದರಿಂದ ಈಗಲಿಂದಲೇ ಬೂತ್ ಮಟ್ಟದಿಂದ ಪಕ್ಷ ಸಂಘಟಿಸಬೇಕು. ಕಂಪ್ಲಿ ಕ್ಷೇತ್ರದ ಮೀಸಲಾತಿ ಬದಲಾಗುತ್ತದೆ ಎಂಬ ಮಾತುಗಳು ಹರಿದಾಡುತ್ತಿದ್ದು, ಇದರ ಕಡೆಗೆ ಕಾರ್ಯಕರ್ತರು ಕಿವಿಗೊಡಬಾರದು. ನೂರಕ್ಕೆ ನೂರಷ್ಟು ನಾನೇ ಮುಂದಿನ ಚುನಾವಣೆಯಲ್ಲಿ ನಿಲ್ಲುತ್ತೇನೆ. ಒಂದು ವೇಳೆ ಮೀಸಲಾತಿ ಬದಲಾದರೆ, ನಿಷ್ಠಾವಂತ ಕಾರ್ಯಕರ್ತರನ್ನು ನಿಲ್ಲಿಸಿ, ಗೆಲ್ಲಿಸಿಕೊಂಡು ಬರುವೆ ಎಂದರು.

ನಂತರ ಜಿಲ್ಲಾಧ್ಯಕ್ಷ ಅನೀಲ್‌ಕುಮಾರ ಮೋಕಾ ಮಾತನಾಡಿ, 24 ವರ್ಷದ ನಂತರ ದೇಶದಲ್ಲಿ ಮತದಾರರ ಪಟ್ಟಿ ಪರಿಷ್ಕರಣೆ ನಡೆಯುತ್ತಿದೆ. ಆದರೆ, ಬಿಜೆಪಿಯವರು ಎಸ್‌ಐಆರ್ ತಂದಿದ್ದಾರೆಂದು ಬೊಬ್ಬೆ ಹೊಡೆಯುತ್ತಿದ್ದಾರೆ. ಇದು ಬಿಜೆಪಿ ತಂದಿದ್ದಲ್ಲಾ ಚುನಾವಣಾ ಆಯೋಗವು ಪರಿಷ್ಕರಣೆ ಮಾಡುತ್ತಿದೆ. ರಾಜ್ಯದಲ್ಲಿ 86 ಲಕ್ಷ ನಕಲಿ ಮತಗಳಿವೆ. ಜಿಲ್ಲೆಯಲ್ಲಿ 92 ಸಾವಿರ, ಕಂಪ್ಲಿ ಕ್ಷೇತ್ರದಲ್ಲಿ 18 ಸಾವಿರಕ್ಕೂ ಹೆಚ್ಚು ನಕಲಿ ಮತಗಳಿವೆ. ಆದ್ದರಿಂದ ಈ ಫೇಕ್ ವೋಟ್‌ಗಳನ್ನು ತೆಗೆದು ಹಾಕಬೇಕಾಗಿದೆ. ಈ ನಿಟ್ಟಿನಲ್ಲಿ ಬಿಎಲ್‌ಎ1 ಸೇರಿದಂತೆ ಬಿಜೆಪಿ ಕಾರ್ಯಕರ್ತರು ಬೂತ್ ಮಟ್ಟದಲ್ಲಿ ಮತದಾರರ ಪಟ್ಟಿಯನ್ನು ಪರಿಶೀಲಿಸಿ, ನಕಲಿ ಮತದಾರರನ್ನು ಹೊರ ಹಾಕುವಂತಹ ಕೆಲಸ ಮಾಡಬೇಕು ಎಂದರು. ಕಂಪ್ಲಿ ಮಂಡಲ ಅಧ್ಯಕ್ಷ ಸಿ.ಡಿ.ಮಹಾದೇವ

ಅಧ್ಯಕ್ಷತೆವಹಿಸಿ ಮಾತನಾಡಿ, ಕ್ಷೇತ್ರದ ಪ್ರತಿ ಬೂತ್ ಮಟ್ಟದಲ್ಲಿ ಪಾರದರ್ಶಕ ಮತದಾರರ ಪರಿಷ್ಕರಣೆಗೆ ಬೆಂಬಲ ನೀಡಲಾಗುವುದು. ಇದರಿಂದ ನಕಲಿ ವೋಟ್‌ಗಳನ್ನು ತಡೆಯಲು ಸಾಧ್ಯ ಎಂದರು. ಕಂಪ್ಲಿ ಕ್ಷೇತ್ರದ ಬಿಎಲ್‌ಎ1 ಜಿ.ಶ್ರೀನಿವಾಸ ಪ್ರಾಸ್ತಾವಿಕವಾಗಿ ಮಾತನಾಡಿ, ಮತದಾರರ ಪಟ್ಟಿ ವಿಶೇಷ ತೀವ್ರ ಪರಿಷ್ಕರಣೆ(ಎಸ್‌ಐಆರ್) ನಡೆಯುತ್ತಿದ್ದು, ಇದರಿಂದ ಮತದಾರರ ಪಟ್ಟಿಯನ್ನು ಪಾರದರ್ಶಕವಾಗಿಟ್ಟುಕೊಳ್ಳುವುದು ಮತ್ತು ಅರ್ಹ ಮತದಾರರು ಪಟ್ಟಿಯಿಂದ ಹೊರಗುಳಿಯದಂತೆ ಎಚ್ಚರವಹಿಸುವ ಉದ್ದೇಶದ ಜೊತೆಗೆ ಕಳ್ಳ ಮತಗಳಿಗೆ ಸಂಪೂರ್ಣವಾಗಿ ಕಡಿವಾಣ ಬೀಳಲಿದೆ ಎಂದರು. ನಂತರ ನೂತನವಾಗಿ ನೇಮಕಗೊಂಡ ವಿವಿಧ ಮೋರ್ಚದ ಪದಾಧಿಕಾರಿಗಳಿಗೆ ಆದೇಶ ಪ್ರತಿ ನೀಡಲಾಯಿತು.

ಜಿಲ್ಲಾ ಪ್ರಧಾನ ಕಾರ್ಯದರ್ಶಿ ಸುನೀಲ್‌ರೆಡ್ಡಿ, ಎಸ್‌ಐಆರ್ ಸಂಚಾಲಕ ಗಾಳಿ ಶಂಕ್ರಪ್ಪ, ರಾಜ್ಯ ಕಾರ್ಯಕಾರಣಿ ಸದಸ್ಯ ರ?ರಂಗಳ್ಳಿ ತಿಮ್ಮಾರೆಡ್ಡಿ, ಜಿಲ್ಲಾ ಉಪಾಧ್ಯಕ್ಷ ಅಳ್ಳಳ್ಳಿ ವಿರೇಶ, ಕುರುಗೋಡು ಮಂಡಲ ಅಧ್ಯಕ್ಷ ಮದಿರೆ ಕುಮಾರಸ್ವಾಮಿ, ಜಿಲ್ಲಾ ಮಹಿಳಾ ಮೋರ್ಚ ಪ್ರಧಾನ ಕಾರ್ಯದರ್ಶಿ ರಬಿಯಾ ನಿಸಾರ್, ಮಂಡಲ ಯುವ ಮೋರ್ಚ ಉಪಾಧ್ಯಕ್ಷ ಎನ್.ಮನೋಜಗೌಡ, ನಗರ ಘಟಕ ಅಧ್ಯಕ್ಷ ಮುರಳಿ ಮೋಹನ್‌ರೆಡ್ಡಿ, ಪ್ರಧಾನ ಕಾರ್ಯದರ್ಶಿಗಳಾದ ಕಟ್ಟೆ ವಿಶ್ವನಾಥ, ಬಸವಪ್ರಭು ಸೇರಿದಂತೆ ಮುಖಂಡರು, ಕಾರ್ಯಕರ್ತರು ಇದ್ದರು.

OWNER, PUBLISHER, PRINTER BY IRFAN K H NO. 3/117, BALAGANUR, SINDHANOOR, RAICHUR-584138 KARNATAKA AND PRINTED AT SHIVANI PRINTERS, HULKOTI, NEW COURT, OPPOSITE PLOT NO. 28 RS NO. 312/3B, GARAG COMPLEX, GADAG-582101